ಸಂಪುಟ : 9 ಸಂಚಿಕೆ 150 ಪುಟ : 4 ಬೆಲೆ: 3.00 ಶುಕ್ರವಾರ ಜುಲೈ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 150 Pages : 4 Price : 3.00 Friday July 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜುಲೈ 19 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ಗಂಗಿಮಡಿ 1 ರಿಂದ 5 ರವರೆಗಿನ ಲೈನ್, ನಿಂಗಪ್ಪ ಲೈನ್, ಸಫಾಯಿ ಅವರ ಲೈನ್, ಪಾಮಡೆಯವರ ಲೈನ್ ಉಕ್ಕಿಯವರ ಲೈನ್, ಸ್ವಾಮಿ ಅವರ ಲೈನ್, ಗಾರ್ಡನ್ ಲೈನ್. ವಾರ್ಡ್ ನಂ. 7 ಶಿವಾಜಿನಗರದ ಎಲ್ಲಾ ಭಾಗಗಳು, ಪಂಚಲಕ್ಷ್ಮೀ ಬಡಾವಣೆ 4 ಭಾಗಗಳು, ರಂಗಪ್ಪಜ್ಜನ ಮಠ ಭಾಗ-1,2. ವಾರ್ಡ್ ನಂ. 32 ಉದಯನಗರ, ಹಳೆ ಕಚೇರಿ ರೋಡ್, ಜೋಡ ಮಾರುತಿ ಗುಡಿ ಲೈನ್, ರಂಗನವಾಡ, ಜಂಡಾ ಕಟ್ಟಿ, ಗುಜ್ಜರ ಬಸ್ತಿ, ಸುಣಗಾರ ಓಣಿ, ತ್ರಿಕೋಟೇಶ್ವರ ರಸ್ತೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 35 ಈ ಡಬ್ಲ್ಯೂ ಎಸ್ 1, 2, 3 ನೇ ಕ್ರಾಸ್‌ಗಳು ನೀಲಮ್ಮತಾಯಿ ಮಠ, ಆದರ್ಶ ನಗರ, ಬಾಪೂಜಿನಗರ, ರಾಮನಗರ, ಸೇವಾಲಾಲ್ ನಗರ 9 ನಂ ಶಾಲೆ, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 33 ಕೇಶವ ನಗರ, ಬಸಯ್ಯ ಲೈನ, ಪಿಡ್ಡಿ ಅವರ ಲೈನ್, ಸಾವಳ್ಗಿ ಲೈನ್, ಪುರದ ಭಾಗ -1, 2. ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಎಲ್ಲಾ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀಸಲು ಅನುದಾನ ಗ್ಯಾರಂಟಿಗೆ ಬಳಸಿದ್ದು ಖಂಡನಾರ್ಹ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪರಿಶಿಷ್ಟ ಅಭಿವೃದ್ಧಿ ಅಭ್ಯುದಯಕ್ಕೆ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ಗ್ಯಾರಂಟಿ ಮತ್ತು ಇತರ ಉದ್ದೇಶಗಳಿಗಾಗಿ ಬಳಸಿರುವ ಸರ್ಕಾರದ ನಡೆ ಖಂಡನಾರ್ಹ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಹೇಳಿದ್ದಾರೆ.

ಶೋಷಿತ ಸಮುದಾಯಗಳನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಪ್ರಯತ್ನವಾಗಿ ಮಾಡಿದ ಕಾಯ್ದೆಯನ್ನು ಸರಕಾರ ದುರುಪಯೋಗಪಡಿಸಿದೆ. ಈ ಬಗೆಗಿನ ಸಮಗ್ರ ಮಾಹಿತಿಗಳನ್ನು ಮಾಧ್ಯಮಗಳು ಬಹಿರಂಗಪಡಿಸುತ್ತಿವೆ. ಎಸ್‌ಎಸ್‌ಪಿ, ಟಿ.ಎಸ್‌ಪಿ 2014/15ರಿಂದ 2023/24ರವರೆಗಿನ ಅಂಕಿ ಅಂಶಗಳ ಪ್ರಕಾರ ನಿಗದಿಪಡಿಸಿದ ಅನುದಾನ 2.56 ಲಕ್ಷ ಕೋಟಿ ರೂಪಾಯಿ, ಬಿಡುಗಡೆ-ಯಾದ ಅನುದಾನ 2.47 ಲಕ್ಷ ಕೋಟಿ, ವೆಚ್ಚವಾದ ಅನುದಾನ 2.41 ಲಕ್ಷ ಕೋಟಿ ರೂಪಾಯಿ (ಶೇ 94.22) ಆಗಿದೆ.

ಕಳೆದೆರಡು ವರ್ಷಗಳಿಂದ ಗ್ಯಾರಂಟಿಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅನುದಾನವನ್ನು ಬಳಸಲಾಗಿದೆ. ಪರಿಶಿಷ್ಟರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಮೀಸಲಿಟ್ಟ ಅನುದಾನ ಸಮರ್ಪಕವಾಗಿ ಆ ಸಮುದಾಯಕ್ಕೆ ತಲುಪುತ್ತಿಲ್ಲ ಎಂಬ ಆರೋಪವು ಕೇಳಿ ಬರುತ್ತಿದೆ. ಈ ರೀತಿಯಲ್ಲಿ ಸರ್ಕಾರ ಪರಿಶಿಷ್ಟರ ನಿಧಿಗೆ ಕನ್ನ ಹಾಕಿರುವುದು ಸರಿಯಲ್ಲ ಎಂದು ಅವರು ಹೇಳಿದ್ದಾರೆ.

### 'ಮತದಾರರಿಗೆ ಧನ್ಯವಾದ' ಯಾತ್ರೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಅಭಿಮತ

## ಕ್ಷೇತ್ರದ ಜನರ ವಿಶ್ವಾಸ ಮರೆಯಲು ಸಾಧ್ಯವಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಗ್ಗಾವಿ-ಸವಣೂರು ಕ್ಷೇತ್ರದ ಜನರ ಪ್ರೀತಿ, ವಿಶ್ವಾಸವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ನಮ್ಮ ನಿಮ್ಮ ಸಂಬಂಧ ಶಾಶ್ವತವಾದದ್ದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಶಿಗ್ಗಾವಿ ಕ್ಷೇತ್ರದಲ್ಲಿ ನಡೆಸುತ್ತಿರುವ ಧನ್ಯವಾದ ಯಾತ್ರೆಯಲ್ಲಿ ಪಾಲ್ಗೊಂಡು ಹಳೆ ಮುತ್ತಳ್ಳಿ, ತಿಮ್ಮಾಪುರ, ಎನ್.ಎಂ. ತಡಸ, ಕಡಹಳ್ಳಿ, ಹಿರೇಬೆಂಡಿಗೇರಿ, ಚಿಕ್ಕಬೆಂಡಿಗೇರಿ, ಬೆಳವಲಕೊಪ್ಪ, ಸುರುಪ್ ಬೆಂಡಿಗೇರಿ ಗ್ರಾಮಗಳಲ್ಲಿ ಮತದಾರರಿಗೆ ಧನ್ಯವಾದ ಅರ್ಪಿಸಿ ಮಾತನಾಡಿದರು.

ನನ್ನನ್ನು ನಾಲ್ಕು ಬಾರಿ ಶಾಸಕನನ್ನಾಗಿ ಆಯ್ಕೆ ಮಾಡಿದ್ದೀರಿ, ಉಪಕಾರ ಮಾಡಿದವರ ಉಪಕಾರ ಸ್ಮರಣೆ ಮಾಡುವುದು ನಮ್ಮ ಧರ್ಮ. ಕೇವಲ ಅಧಿಕಾರ ಇದ್ದರೆ ಮಾತ್ರ ಬರಬೇಕೆಂದು ಇಲ್ಲ. ನಮ್ಮ ನಿಮ್ಮ



ನಿಮ್ಮ ಊರಿಗೆ ಬಂದಾಗ ನೀವು ತೋರಿದ ಪ್ರೀತಿ ವಿಶ್ವಾಸ ಮರೆಯಲು ಸಾಧ್ಯವಿಲ್ಲ. ಅದಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಹೀಗಾಗಿ ನಮ್ಮ ನಿಮ್ಮ ಸಂಬಂಧ ನಿರಂತರವಾಗಿ, ಶಾಶ್ವತವಾಗಿ ಉಳಿಸಿಕೊಂಡು ಹೋಗೋಣ್ವೆಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ನಡುವಿನ ಸಂಬಂಧ ಮುಖ್ಯ. ನಾನು ಮೊದಲಿನಂತೆಯೇ ಸದಾಕಾಲ ನಿಮ್ಮಕೆಲಸ ಕಾರ್ಯಗಳನ್ನು ಮುಂದುವರೆಸಿಕೊಂಡು ಹೋಗುತ್ತೇನೆ ಎಂದು ಹೇಳಿದರು.

ಸಾಮಾನ್ಯವಾಗಿ ರಾಜಕಾರಣದಲ್ಲಿ ಚುನಾವಣೆಗೆ ಸೀಮಿತ ಅಥವಾ ರಾಜಕಾರಣಕ್ಕೆ ಸೀಮಿತವಾದ ಸಂಬಂಧಗಳಿರುತ್ತವೆ. ಎರಡು ರೀತಿಯ ರಾಜಕಾರಣ ಇರುತ್ತದೆ. ಒಂದು ಅಧಿಕಾರದ ರಾಜಕಾರಣ ಇನ್ನೊಂದು ಜನರ ರಾಜಕಾರಣ. ನಾನು ನಿಮ್ಮೆಲ್ಲರ ಆಶೀರ್ವಾದದಿಂದ ಜನರ ರಾಜಕಾರಣ ಮಾಡುತ್ತ ಬಂದಿದ್ದೇನೆ. ಆ ಪ್ರೀತಿ ಉಳಿಸಿಕೊಳ್ಳಲು ನನ್ನ ಉಸಿರಿರುವವರೆಗೂ ನಿಮ್ಮ ಸೇವೆ ಮಾಡುತ್ತೇನೆ ಎಂದು ಹೇಳಿದರು.

ಶಿಗ್ಗಾವಿ ತಾಲೂಕು ಯಾವ ರೀತಿ ಅಭಿವೃದ್ಧಿಯಾಗಿದೆ ಎನ್ನುವುದನ್ನು ನೀವೆಲ್ಲ ಗಮನಿಸಿದ್ದೀರಿ. ಅಭಿವೃದ್ಧಿ ನಿರಂತರವಾಗಿ ನಡೆಯುವ ಪ್ರಕ್ರಿಯೆ. ಊರಿಗೆ ಯಾವುದಾದರೂ ಒಂದು ಕೆಲಸ ಮಾಡಿದರೆ ಮುಗಿಯಿತು ಎನ್ನುವ ಕಾಲ ಇತ್ತು. ಅದೇ ಕೆಲಸವನ್ನು ಹತ್ತು ವರ್ಷ ಹೇಳುತ್ತಿದ್ದರು. ಆದರೆ ಈಗ ಜನರು ಜಾಗೃತರಾಗಿದ್ದಾರೆ. ಜನಪ್ರತಿನಿಧಿಗಳು ಒಂದಾದ ನಂತರ ಒಂದು ಕೆಲಸವನ್ನು ನಿರಂತರ ಮಾಡಬೇಕಾಗುತ್ತದೆ. ಆಗ ಮನಸಿಗೆ ಸಮಾಧಾನ ಆಗುತ್ತದೆ. ತಾಲೂಕಿನ ಅಭಿವೃದ್ಧಿ ಹೇಗೆ ಎಂದು ಒಂದು ತೋಟ ಮಾಡಿ, ಹದ ಮಾಡಿ, ಸಸಿ ನೆಟ್ಟು ಬೆಳೆಸಿದ್ದೇವೆ. ಕೆಲವು ಫಲ ಕೊಡುತ್ತವೆ. ಕೆಲವು ಫಲ ಕೊಡುವುದಿಲ್ಲ. ಆ ತೋಟವನ್ನು ಎಲ್ಲರೂ ಸಂರಕ್ಷಣೆ ಮಾಡಿಕೊಂಡು ಹೋದರೆ, ಅದರಿಂದ ನಮಗೆ ಹೆಚ್ಚಿನ ಫಲ ದೊರೆಯುತ್ತದೆ. ತೋಟ ಕಾಯುವ ಮತ್ತು ಬೆಳೆಸುವ ಕೆಲಸವನ್ನು ತಾವೆಲ್ಲರೂ ಸೇರಿ ಮಾಡಬೇಕು. ನಿಮ್ಮ ಜೊತೆಗೆ ನಾನಿದ್ದೇನೆ ಎಂದು ಹೇಳಿದರು.

ನಾನು ಜಾತಿ, ಮತ, ಪಂಥ ಭೇದವಿಲ್ಲದೆ ಕೆಲಸ ಮಾಡಿದ್ದೇನೆ. ಚುನಾವಣೆಗಳು ಬರುತ್ತವೆ ಹೋಗುತ್ತವೆ. ಯಾರಾದರೂ ಶಾಸಕರಾಗಬಹುದು, ಯಾರಾದರೂ ಸಂಸದರಾಗಬಹುದು. ಆದರೆ, ಊರಿನ ಅಭಿವೃದ್ಧಿ ಹಾಗೂ ಸಾಮಾಜಿಕ ಸಾಮರಸ್ಯಕ್ಕೋಸ್ಕರ ನಾವೆಲ್ಲರೂ ಒಗ್ಗಟ್ಟಾಗಿರಬೇಕು. ಮನುಷ್ಯರಾಗಿ ಹುಟ್ಟಿದ ಮೇಲೆ ಬದುಕು ನಮ್ಮ ಕೈಯಲ್ಲಿರುತ್ತದೆ. ನಾವೆಲ್ಲ ಒಂದು ಎಂದು ಕೆಲಸ ಕಾರ್ಯಗಳನ್ನು ಮಾಡೋಣ ಎಂದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಪೂಜ್ಯ ಚಂದ್ರಶೇಖರ ದೇವರು

## ಮಲ್ಲಮ್ಮರ ಜೀವನಾದರ್ಶ ಅನುಕರಣೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿವಶರಣೆ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಕಾಯಕದಿಂದಲೇ ಮುಕ್ತಿ ಎಂಬ ಶರಣ ವಾಣಿಯಂತೆ ಕೃಷಿ ಕಾಯಕದಲ್ಲಿ ಸಾಧನೆಗೈದವರು. ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸಿದ ಮಲ್ಲಮ್ಮನವರು ಕರುಣಾಮಯಿ ಮತ್ತು ದಾಸೋಹಿಯಾಗಿದ್ದರು ಎಂದು ಪೂಜ್ಯ ಚಂದ್ರಶೇಖರ ದೇವರು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2702ನೇ ಶಿವಾನುಭವ ಕಾರ್ಯಕ್ರಮದ ಸಮ್ಮುಖ ವಹಿಸಿ ಮಾತನಾಡಿದ ಅವರು, ಸಾಂಸಾರಿಕ ಜೀವನದಲ್ಲಿ ಎದುರಾದ ಅನೇಕ ಕಷ್ಟದ ಪರಿಸ್ಥಿತಿಗಳನ್ನು ಮೆಟ್ಟಿನಿಂತು



ಸಮಾಜೋದ್ಧಾರಕ್ಕೆ ಹಗಲಿರುಳು ಶ್ರಮಿಸಿದ ಮಹಾತಾಯಿ ಮಲ್ಲಮ್ಮನವರ ಜೀವನದ ಆದರ್ಶಗಳು, ಮೌಲ್ಯಗಳು ಅನುಕರಣೀಯ ಎಂದರು.

ನಿವೃತ್ತ ಪ್ರಾಚಾರ್ಯ ಪ್ರೊ. ಶಿವಣ್ಣ ಯರಾಶಿ ಉಪನ್ಯಾಸ ನೀಡಿ, ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಭಕ್ತಿ ಮತ್ತು ಕಾಯಕದಿಂದ ನಾಡಿನಾದ್ಯಂತ ಹೆಸರುವಾಸಿಯಾಗಿದ್ದಾಳೆ. ಹೇಮರಡ್ಡಿ ಮಲ್ಲಮ್ಮನ ಆದರ್ಶಗಳು, ಜೀವನ ಮೌಲ್ಯಗಳು ಮನುಕುಲಕ್ಕೆ ಮತ್ತು ಇಂದಿನ ಸ್ತ್ರೀಕುಲಕ್ಕೆ ಮಾದರಿಯಾಗಿವೆ ಎಂದರು.

ಸುಪ್ರಸಿದ್ಧ ವಯೋಲಿನ್ ಮತ್ತು ತಬಲಾ ವಾದಕರಾದ ಡಾ. ನಾರಾಯಣ ಹಿರೇಕೊಳಚಿ, ಡಾ. ಗುರುಬಸವ ಮಹಾಮನಿ, ಸುರೇಶ ಮಂಗಳೂರ, ಪಂ. ಶರಣಕುಮಾರ ಗುತ್ತರಗಿ ಅವರ ವಯೋಲಿನ್ ಮತ್ತು ತಬಲಾ ವಾದನ ಜನಮನ ಸೂರೆಗೊಂಡಿತು. ಧರ್ಮಗ್ರಂಥ ಪಠಣವನ್ನು ಪ್ರಶಾಂತ ಶಿವಾನಂದ ಜಡಗೊಂಡ, ವಚನ ಚಿಂತನೆಯನ್ನು ಮಂಜುನಾಥ ಬಸವರಾಜ ಅಸ್ಕಿ ಮಾಡಿದರು. ದಾಸೋಹ ಭಕ್ತಿಸೇವೆ ವಹಿಸಿದ್ದ ಶರಣೆ ಲಿಂ. ಬಸಲಿಂಗಮ್ಮ ಮಲ್ಲಣ್ಣ ದೇಸಾಯಿ ಸುಳ್ಳ ಇವರ ಸ್ಮರಣಾರ್ಥ ಅವರ ಕುಟುಂಬದ ಸದಸ್ಯರನ್ನು ಸಂಮಾನಿಸಲಾಯಿತು.


ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

## ಆಷಾಢ ಏಕಾದಶಿಯ ವಿಶೇಷ ಪೂಜೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಆಷಾಢ ಶುದ್ಧ ಏಕಾದಶಿ ಪ್ರಯುಕ್ತ ಪಟ್ಟಣದ ರುಕ್ಮಿಣಿ ಪಾಂಡುರಂಗ, ವೆಂಕಟೇಶ್ವರ ಹಾಗೂ ಶ್ರೀಕೃಷ್ಣ ದೇವಾಲಯಕ್ಕೆ ಆಗಮಿಸಿದ ಸದ್ಭಕ್ತರು ವಿಶೇಷ ಪೂಜೆ ಸಲ್ಲಿಸುವ ಮೂಲಕ ತೀರ್ಥ, ಪ್ರಸಾದ ಸ್ವೀಕರಿಸಿದರು.

ಇಲ್ಲಿನ ವಾಣಿಪೇಟೆ, ಪತ್ತಾರಗಲ್ಲಿಯ ರುಕ್ಮಿಣಿ ಪಾಂಡುರಂಗ ದೇವಸ್ಥಾನದಲ್ಲಿ ವಿಶೇಷವಾಗಿ ದೇಗುಲದ ದ್ವಾರಕ್ಕೆ ತಳಿರು-ತೋರಣ, ಹೂಗಳಿಂದ ಸಿಂಗಾರ ಮಾಡಿ ದೇವಸ್ಥಾನವನ್ನು ಹೂಗಳಿಂದ ಅಲಂಕರಿಸಲಾಗಿತ್ತು. ಬೆಳಿಗ್ಗೆ ವಿಠ್ಠಲ



ಹಾಗೂ ವೆಂಕಟೇಶ್ವರ ಮಂದಿರಗಳಲ್ಲಿ ಸ್ವಾಮಿಗೆ ಪುರುಷಸೂಕ್ತದಿಂದ ಅಭಿಷೇಕ ಪೂಜೆ ಸಲ್ಲಿಸಿ, ವಿವಿಧ ಬಗೆಯ ಹೂಗಳಿಂದ ಮತ್ತು ತುಳಸಿ ಅರ್ಚನೆಯೊಂದಿಗೆ ವಿಶೇಷ ಪೂಜೆಯನ್ನು ಸಲ್ಲಿಸಲಾಯಿತು.

ಈ ವೇಳೆ ಅರ್ಚಕ ಬಧರಿಆಚಾರ್ಯ ಜೋಶಿ ಮಾತನಾಡಿ, ಆಷಾಡ ಏಕಾದಶಿ ಅತ್ಯಂತ ಪವಿತ್ರದಿನವಾಗಿದೆ.

ಪಾಂಡುರಂಗನ ದರ್ಶನ, ಉಪವಾಸ ಮಾಡುವುದು ಇನ್ನೂ ಶ್ರೇಷ್ಠ. ಇದರ ಮಹತ್ವದಿಂದಲೇ ಭಕ್ತರು ಆಗಮಿಸಿ ದರ್ಶನ ಪಡೆಯುವುದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ ಎಂದರು.

## ವಕಾರಸಾಲು ಅತಿಕ್ರಮಣ: ನಗರಸಭೆ ಎಚ್ಚರಿಕೆ





■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಮಧ್ಯಭಾಗದಲ್ಲಿರುವ 34 ಎಕರೆ ವ್ಯಾಪ್ತಿಯ ವಕಾರಸಾಲಿನಲ್ಲಿ ಅನಧಿಕೃತವಾಗಿ ಬಿದಿರು ಮಾರಾಟ ಮಾಡುತ್ತಿದ್ದ ವ್ಯಾಪಾರಸ್ಥರಿಗೆ ನಗರಸಭೆ ಅಧಿಕಾರಿಗಳು ಬಿಸಿ ಮುಟ್ಟಿಸಿದ್ದಾರೆ.

ವಕಾರಸಾಲು ತೆರವು ನಂತರ ಅನಧಿಕೃತವಾಗಿ ಬಿದಿರು ಮಾರಾಟದಲ್ಲಿ ನಿರತರಾಗಿದ್ದ ಸ್ಥಳಗಳ ಮೇಲೆ ಗುರುವಾರ ನಗರಸಭೆ ಅಧಿಕಾರಿಗಳು ದಾಳಿ ನಡೆಸಿ, ಬಿದಿರು ತೆರವುಗೊಳಿಸಲು ಮುಂದಾದರು. ಈ ವೇಳೆ ವ್ಯಾಪಾರಸ್ಥರು ಮತ್ತು ನಗರಸಭೆ ಸಿಬ್ಬಂದಿಗಳ ಮಧ್ಯೆ ಮಾತಿನ ಚಕಮಕಿಯೂ ನಡೆಯಿತು.

ಈ ವೇಳೆ ಬಿದಿರು ತೆರವು ಮಾಡಿಕೊಳ್ಳಲು ವ್ಯಾಪಾರಸ್ಥರು ಕಾಲಾವಕಾಶ ಕೋರಿದ ಹಿನ್ನೆಲೆಯಲ್ಲಿ ನಗರಸಭೆ ಅಧಿಕಾರಿಗಳು ಒಪ್ಪಿಗೆ ನೀಡಿ ಅಲ್ಲಿಂದ ತೆರಳಿದರು.

ಈ ವೇಳೆ ಮಾತನಾಡಿದ ಬಿದಿರು ವ್ಯಾಪಾರಸ್ಥರು, ವಕಾರಸಾಲು ಅತಿಕ್ರಮಣ ತೆರವು ನಂತರ ಆ ಪ್ರದೇಶದಕ ಅಕ್ಕಪಕ್ಕದ ನಿವಾಸಿಗಳು ಅತಿಕ್ರಮಣ ಮಾಡಿಕೊಂಡಿದ್ದಾರೆ. ವಾಹನ ಚಾಲಕರು ಪಾರ್ಕಿಂಗ್ ಜಾಗ ಮಾಡಿಕೊಂಡಿದ್ದಾರೆ. ಆದರೆ ನಗರಸಭೆ ಅಧಿಕಾರಿಗಳು ಮಾತ್ರ ಬೆರಳೆಣಿಕೆಯ ವ್ಯಾಪರಸ್ಥರ ಮೇಲೆ ದಬ್ಬಾಳಿಕೆ ತೋರಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

### ರಂಭಾಪುರಿ ನಗರದ ಶಾಲೆಗೆ 'ಹಸಿರು ನೈರ್ಮಲ್ಯ ಶಾಲಾ ಅಭ್ಯುದಯ ಪ್ರಶಸ್ತಿ'

## ರಾಜ್ಯ ಪ್ರಶಸ್ತಿಯ ಗರಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ರಂಭಾಪುರಿ ನಗರದಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ 'ಹಸಿರು ನೈರ್ಮಲ್ಯ ಶಾಲಾ ಅಭ್ಯುದಯ ಪ್ರಶಸ್ತಿ 2024' ದೊರಕಿದೆ.

ಚಿಕ್ಕಬಳ್ಳಾಪೂರ ಶ್ರೀ ಸತ್ಯಸಾಯಿ ಅನ್ನಪೂರ್ಣ ಟ್ರಸ್ಟ್ ವತಿಯಿಂದ ರಾಜ್ಯಮಟ್ಟದ ಹಸಿರು ನೈರ್ಮಲ್ಯ ಶಾಲಾ ಅಭ್ಯುದಯ ಪ್ರಶಸ್ತಿಯನ್ನು ಕೊಡಮಾಡುತ್ತಿದ್ದು, ಈ ಬಾರಿ ಪಟ್ಟಣದ ಈ ಶಾಲೆ ಪ್ರಶಸ್ತಿಗೆ ಭಾಜನವಾಗಿದೆ. ಪ್ರಶಸ್ತಿಯು 10 ಸಾವಿರ ರೂ.ಗಳ ನಗದು ಹಾಗೂ ಪಾರಿತೋಷಕ ಒಳಗೊಂಡಿದೆ. ಪ್ರಶಸ್ತಿ ವಿತರಣೆ ಕಾರ್ಯಕ್ರಮವು ಜುಲೈ 27ರಂದು ಚಿಕ್ಕಬಳ್ಳಾಪೂರದ ಸತ್ಯಸಾಯಿ ಗ್ರಾಮ ಮುದ್ದೇನಹಳ್ಳಿಯಲ್ಲಿ ಜರುಗಲಿದೆ.

ಪಟ್ಟಣದ ರಂಭಾಪುರಿ ಶಾಲೆ ಒಟ್ಟು 1 ಎಕರೆ ವಿಶಾಲವಾದ

ಶ್ರೀ ಸತ್ಯಸಾಯಿ ಅನ್ನಪೂರ್ಣ ಟ್ರಸ್ಟ್ ವತಿಯಿಂದ ಉತ್ತಮ 100 ಸರಕಾರಿ ಶಾಲೆಗಳಿಗೆ ರಾಜ್ಯ ಮಟ್ಟದಲ್ಲಿ ಈ ಪ್ರಶಸ್ತಿಯನ್ನು ನೀಡುತ್ತಿರುವುದು ಪ್ರೋತ್ಸಾಹದಾಯಕವಾಗಿದೆ. ನಮ್ಮ ಶಾಲೆ ಈ ಪ್ರಶಸ್ತಿಗೆ ಆಯ್ಕೆ ಆಗಿದ್ದು ಸಂತಸ ತಂದಿದೆ

**- ಶಿವಯ್ಯ ಕುಲಕರ್ಣಿ.**
ಎಸ್‌ಡಿಎಂಸಿ ಅಧ್ಯಕ್ಷ.

ಜಾಗವನ್ನು ಹೊಂದಿದ್ದು, ಅರಣ್ಯ ಇಲಾಖೆಯ ಸಹಾಯದಿಂದ ನೂರಾರು ಗಿಡಮರಗಳನ್ನು ಬೆಳೆಸಲಾಗಿದೆ. ಬೋಧನೆ ಹಾಗೂ ಕಲಿಕೆ ಉತ್ತಮ ರೀತಿಯಲ್ಲಿ ಸಾಗುತ್ತಿದೆ. 2023 24ನೇ ಸಾಲಿನಲ್ಲಿ ಪ್ರತಿಭಾ ಕಾರಂಜಿಯಲ್ಲಿ ಹಲವು ಪ್ರಶಸ್ತಿಗಳು ಈ ಶಾಲೆಗೆ ದೊರೆತಿವೆ.

ಹಸಿರು ನೈರ್ಮಲ್ಯ ಅಭ್ಯುಧಯ ಶಾಲಾ ಪ್ರಶಸ್ತಿಗೆ ಅರ್ಜಿ ಸಲ್ಲಿಸಿದ ನಿಮಿತ್ತ ಇತ್ತೀಚೆಗೆ ಶ್ರೀ ಸಾಯಿ ಅನ್ನಪೂರ್ಣ ಟ್ರಸ್ಟ್‌ನವರು ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಶಿಕ್ಷಣ ಪ್ರೇಮಿ ಖಂಡೋಜಿಯವರು ನೀಡಿದ ಎರಡು ತೆಂಗಿನ ಸಸಿಗಳನ್ನು ಟ್ರಸ್ಟ್‌ನ ಸಂತೋಷ್ ಅಲ್ಲತ್ ಹಾಗೂ ರಾಜೀವ್ ಆರ್ ನೆಟ್ಟು ಶಾಲೆ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದರು.

ಮುಖ್ಯ ಶಿಕ್ಷಕಿ ಜೆ.ಎಫ್. ಹಬೀಬ, ಸಹ ಶಿಕ್ಷಕಿ ನಿರ್ಮಲಾ ಎನ್ ಮತ್ತು ಮಾರ್ಗದರ್ಶನ ನೀಡಿದ ಸಿಆರ್‌ಪಿ ಸತೀಶ ಬೊಮಲೆ ಅವರನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ ಅಭಿನಂದಿಸಿದ್ದಾರೆ.

## ಕಾಂಗ್ರೆಸ್ ಸರ್ಕಾರವನ್ನು ಬುಡಮೇಲು ಮಾಡುವುದೇ ಇ.ಡಿ ಉದ್ದೇಶ: ಕೇಂದ್ರದ ಬೆದರಿಕೆಗೆ ಬಗ್ಗುವುದಿಲ್ಲ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

"ಕೇಂದ್ರ ಬಿಜೆಪಿ ಸರ್ಕಾರ ಜಾರಿ ನಿರ್ದೇಶನಾಲಯವನ್ನು (ಇ.ಡಿ) ಬಳಸಿಕೊಂಡು ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಜಾಪ್ರಭುತ್ವ ವಿರೋಧಿ ಕೆಲಸಕ್ಕೆ ಮುಂದಾಗಿದೆ. ಆದರೆ, ಇಂತಹ ಗೊಡ್ಡು ಹೆದರಿಕೆ-ಬೆದರಿಕೆಗಳಿಗೆ ಬಗ್ಗುವ ಮಾತೇ ಇಲ್ಲ" ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಗುರುವಾರ ವಿಧಾನಸೌಧದ ಸಮ್ಮೇಳನಾ ಸಭಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸಿ ಕೇಂದ್ರ ಬಿಜೆಪಿ ಸರ್ಕಾರದ ಪ್ರಜಾಪ್ರಭುತ್ವ ವಿರೋಧಿ ನಡೆಯ ವಿರುದ್ಧ ಛೀಮಾರಿ ಹಾಕಿದ ಅವರು, "ವಾಲ್ಮೀಕಿ ನಿಗಮದ ಹಗರಣ ಪ್ರಕರಣವನ್ನು ತನಿಖೆ ನಡೆಸುತ್ತಿರುವ ಇ.ಡಿ ಅಧಿಕಾರಿಗಳು ವಿಚಾರಣೆಗೊಳಪಟ್ಟವರ ಮೇಲೆ ದಬ್ಬಾಳಿಕೆ ನಡೆಸುತ್ತಿದ್ದಾರೆ. ಈ ಹಗರಣದಲ್ಲಿ ಉನ್ನತ ಮಟ್ಟದಲ್ಲಿರುವವರೂ ಸಹ ಭಾಗಿಯಾಗಿದ್ದಾರೆ ಎಂದು ಹೇಳಿಕೆ ನೀಡುವಂತೆ ಒತ್ತಾಯಿಸುತ್ತಿದ್ದಾರೆ" ಎಂದು ಆರೋಪಿಸಿದರು.

"ಹಗರಣದಲ್ಲಿ ಸಿಎಂ-ಡಿಸಿಎಂ ಸಹ ಭಾಗಿಯಾಗಿದ್ದಾರೆ ಎಂದು ತಪ್ಪೊಪ್ಪಿಗೆ ನೀಡಿ, ಇಲ್ಲದಿದ್ದರೆ ನಿಮಗೆ ಇ.ಡಿ ಪವರ್ ಗೊತ್ತಿಲ್ಲ. ಆಮೇಲೆ ನೀವು ಕಷ್ಟಕ್ಕೆ ಸಿಲುಕುತ್ತೀರಿ ಎಂದು ವಿಚಾರಣೆ ವೇಳೆ ಹೆದರಿಸುವ ಮೂಲಕ ಇಡಿ ಅಧಿಕಾರಿಗಳು ತನಿಖೆಯನ್ನೇ ತಪ್ಪುದಾರಿಗೆ ಕೊಂಡೊಯ್ಯುತ್ತಿದ್ದಾರೆ. ಇ.ಡಿ ಅಧಿಕಾರಿಗಳ ಜೊತೆ ರಾಜಿ ಸಂಧಾನ ಮಾಡಿಕೊಂಡು ಅವರು ಹೇಳಿದ್ದನ್ನು ಕೇಳಿಕೊಂಡು ಇರುವವರಿಗೆ ಅಭಯ ನೀಡುತ್ತಿದ್ದಾರೆ. ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ಪ್ರಜಾಪ್ರಭುತ್ವದ ಅಡಿಯಲ್ಲಿ ಚುನಾಯಿತಗೊಂಡಿರುವ ಸರ್ಕಾರವನ್ನೇ ಬುಡಮೇಲು ಮಾಡುವ ಕೆಲಸಕ್ಕೆ ಮುಂದಾಗಿದ್ದಾರೆ" ಎಂದು ಅವರು ಆಕ್ರೋಶ ಹೊರಹಾಕಿದರು.

"ಜನ ಮನ್ನಣೆ ಹಾಗೂ ಅಧಿಕಾರ ಕಳೆದುಕೊಂಡು ರಾಜ್ಯದಲ್ಲಿ ದುರ್ಬಲವಾಗಿರು ಬಿಜೆಪಿ ನಾಯಕರು ಜಾರಿ ನಿರ್ದೇಶನಾಲಯವನ್ನು (ಇಡಿ) ಬಳಸಿಕೊಂಡು ವಾಮಮಾರ್ಗದಲ್ಲಿ ಮತ್ತೆ ಅಧಿಕಾರಕ್ಕೆ ಏರಲು ಯತ್ನಿಸುತ್ತಿದ್ದಾರೆ. ಆಪರೇಷನ್ ಕಮಲ ಸೇರಿದಂತೆ ಬಿಜೆಪಿಯ ಇಂತಹ ಜನ ವಿರೋಧಿ ಕಸರತ್ತುಗಳು ದೇಶದ ರಾಜಕೀಯ ಇತಿಹಾಸದಲ್ಲಿ ಹೊಸ ವಿಚಾರವೇನಲ್ಲ. ಇಡಿ, ಸಿಬಿಐ ಹಾಗೂ ಐಟಿಯನ್ನು ಸರ್ಜಿಕಲ್ ಸ್ಟ್ರೈಕ್ ತರ ವಿರೋಧ ಪಕ್ಷಗಳ ವಿರುದ್ಧ ಬಿಜೆಪಿ ಬಳಕೆ ಮಾಡುತ್ತಲೇ ಇದೆ. ಇದೀಗ ಮುಂದುವರೆದ ಬಾಗವಾಗಿ ಕರ್ನಾಟಕದಲ್ಲೂ ಹತಾಶ ಮನೋಭಾವದಿಂದ 2009ರಂತೆ ಆಪರೇಷನ್ ಕಮಲ ಸಾಧ್ಯವಿಲ್ಲ ಎಂದು ತಿಳಿದು ಇದೀಗ ಇ.ಡಿ ಮೂಲಕ ರಾಜ್ಯ ಸರ್ಕಾರವನ್ನು ಬುಡಮೇಲು ಮಾಡುವ ಕೆಲಸವನ್ನು ಕೇಂದ್ರ ಸರ್ಕಾರ ಮುಂದೆ ನಿಂತು ಮಾಡುತ್ತಿದೆ. ಆದರೆ, ಇವರ ಗೊಡ್ಡು ಬೆದರಿಕೆಗಳಿಗೆ, ಸಂವಿಧಾನ ವಿರೋಧಿ ನಡೆಗಳಿಗೆ ಬಗ್ಗುವ ಮಾತೇ ಇಲ್ಲ" ಎಂದು ಸ್ಪಷ್ಟಪಡಿಸಿದರು.

### ವಿಕಲಚೇತನರಿಗೆ, ಹಿರಿಯ ನಾಗರಿಕರಿಗೆ ವಿವಿಧ ಸಲಕರಣೆಗಳ ವಿತರಣೆ

## ಸರಕಾರದ ಸವಲತ್ತುಗಳನ್ನು ಪಡೆದುಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರಿಗೆ ಸರಕಾರ ಸಾಕಷ್ಟು ಯೋಜನೆಗಳನ್ನು ಹಾಕಿಕೊಂಡಿವೆ. ಪ್ರತಿವರ್ಷ ಎಲ್ಲೆಡೆ ವಿಕಲಚೇತನರಿಗೆ ಹಾಗೂ ಹಿರಿಯ ನಾಗರೀಕರಿಗೆ ವಿವಿಧ ಸಾಧನ ಸಲಕರಣೆಗಳ ಅಳತೆ ಹಾಗೂ ಮೌಲ್ಯಮಾಪನ ತಪಾಸಣೆ ಮಾಡಿ ಅವರಿಗೆ ಅವಶ್ಯವಿರುವ ಸಲಕರಣೆಗಳನ್ನು ಉಚಿತವಾಗಿ ನೀಡುವ ಕಾರ್ಯವನ್ನು ಮಾಡುತ್ತಿದೆ ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಲ್ಯಾಣ ಅಧಿಕಾರಿ ಮಹಾಂತೇಶ ಕುರಿ ಹೇಳಿದರು.

ಅವರು ನಗರದ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಅಲಿಂಕೋ ಸಂಸ್ಥೆ ಬೆಂಗಳೂರು ಇವರ ಸಹಯೋಗದೊಂದಿಗೆ ತಾಲೂಕಿನ ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ವಿವಿಧ ಸಲಕರಣೆಗಳ ಅಳತೆ ಹಾಗೂ ಮೌಲ್ಯಮಾಪನ ತಪಾಸಣಾ ಶಿಬಿರದಲ್ಲಿ ಪಾಲ್ಗೊಂಡು ಮಾತನಾಡಿದರು.

ಗದಗ ತಾಲೂಕಿನ 27 ಗ್ರಾಮ ಪಂಚಾಯಿತಿ, ನಗರಸಭೆ, ಪಟ್ಟಣ ಪಂಚಾಯತ ವ್ಯಾಪ್ತಿಯಿಂದ ಸಾವಿರಾರು ಜನರು ಆಗಮಿಸಿದ್ದರು. ವಿಕಲಚೇತರಿಗೆ, ಹಿರಿಯ ನಾಗರಿಕರಿಗೆ ಅವಶ್ಯವಿರುವ ಬ್ಯಾಟರಿ ಚಾಲಿತ ವೀಲಚೇರ್, ಕಿವಿಯಂತ್ರ, ಗಾಲಿಕುರ್ಚಿ, ಬಿಳಿಕೋಲು, ವಾಟರ್ ಬೆಡ್, ವೀಲ ಚೇರ್, ತ್ರಿಚಕ್ರ ಸೈಕಲ್, ಕೃತಕ ಕಾಲು, ಕೈ ಸೇರಿದಂತೆ ಅನೇಕ ಪರಿಕರಗಳ ಬಗ್ಗೆ ಬೆಂಗಳೂರಿನ ಅಲಿಂಕೋ ಸಂಸ್ಥೆಯವರು ಅಳತೆ ಮೌಲ್ಯಮಾಪನ ಮಾಡಿದರು.

ಇಲಾಖೆಯ ಮಾಹಿತಿ ಪ್ರಕಾರ, ತಾಲೂಕಿನಲ್ಲಿ 4260 ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಸೇರಿ ಒಟ್ಟು 8965 ಜನರಿದ್ದಾರೆ. ಈ ಯೋಜನೆಯ ಲಾಭ ಪಡೆದುಕೊಳ್ಳಲು ವೈದ್ಯಕೀಯ ಪ್ರಮಾಣಪತ್ರ, ಆಧಾರ್ ಕಾರ್ಡ್, ರೇಷನ್‌ಕಾರ್ಡ್ ಅವಶ್ಯವಾಗಿದ್ದು, ಮುಂಜಾನೆಯಿಂದಲೇ ಜನರು ಆಸ್ಪತ್ರೆಯ ಎದುರಿನಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ಜಮಾಯಿಸಿದ್ದರು. ಸುಮಾರು 900ಕ್ಕೂ ಅಧಿಕ ಜನರ ತಪಾಸಣೆ, ಅಳತೆ ಕಾರ್ಯವನ್ನು ಅಲಿಂಕೋ ಸಂಸ್ಥೆಯವರು ನೆರವೇರಿಸಿದರು.

ಈ ಕಾರ್ಯಕ್ರಮದಲ್ಲಿ ರೆಡ್ ಕ್ರಾಸ್ ಸಂಸ್ಥೆಯ ನೋಡಲ್ ಅಧಿಕಾರಿ ಪ್ರಕಾಶ ಗಾಣಿಗೇರ, ತಾ.ಪಂ ಎಂಆರ್‌ಡಬ್ಲ್ಯೂ ಖಾಜಾಹುಸೇನ ಕಾತರಕಿ, ಅಲಿಂಕೋ ಸಂಸ್ಥೆ ಸಿಬ್ಬಂದಿಗಳು, ಗದಗ ತಾಲೂಕಿನ ಎಲ್ಲ ವಿಆರ್‌ಡಬ್ಲ್ಯೂ ಮತ್ತು ಯುಆರ್‌ಡಬ್ಲ್ಯೂ, ಸ್ಥಳೀಯ ಸಂಘ-ಸಂಸ್ಥೆಯವರು ಪಾಲ್ಗೊಂಡಿದ್ದರು.

ಹಿರಿಯ ನಾಗರಿಕರಿಗೆ ಅಗತ್ಯ ಸಲಕರಣೆಗಳನ್ನು ಕೊಳ್ಳುವದು ದುಸ್ತರವಾಗಿದೆ. ಈ ಕಾರಣಕ್ಕಾಗಿ ವಿಕಲಚೇತನರೊಂದಿಗೆ ಹಿರಿಯ ನಾಗರಿಕರನ್ನೂ ಈ ಯೋಜನೆಗೆ ಒಳಗೊಳ್ಳುವಂತೆ ಮಾಡಿದ್ದು, ಈ ಮೂಲಕ ಉಚಿತವಾಗಿ ಅಗತ್ಯ ಸಲಕರಣೆಗಳನ್ನು ನೀಡಲಾಗುತ್ತಿದೆ.

**– ಮಹಾಂತೇಶ ಕುರಿ.**

ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿ .

### ಲಿಂ. ಶಿವಲಿಂಗ ಶ್ರೀಗಳವರ ಲಿಂಗಾಂಗ ಸಾಮರಸ್ಯದ ಶತಮಾನೋತ್ಸವ ಸಮಾರಂಭ

# ಕಾಯ ಕಣ್ಮರೆಯಾದರೂ ನೆನಹು ಶಾಶ್ವತ

■ವಿಜಯಸಾಕ್ಷಿ ಸುದ್ದಿ, ಮುಧೋಳ

ಸೇರುವುದು ಆಕಸ್ಮಿಕ. ಅಗಲುವುದು ಅನಿವಾರ್ಯ. ಸವಿನೆನಪೊಂದೇ ಶಾಶ್ವತ. ಭೌತಿಕ ಕಾಯ ಕಣ್ಮರೆಯಾದರೂ ಅವರು ಮಾಡಿದ ಸತ್ಕಾರ್ಯಗಳು ಜನಮನದಲ್ಲಿ ಸದಾ ಹಸಿರು. ಲಿಂ. ಶಿವಲಿಂಗ ಶ್ರೀಗಳವರು ಮಾಡಿದ ಧರ್ಮ ಕಾರ್ಯಗಳು ಭಕ್ತರ ಮನದಂಗಳದಲ್ಲಿ ಸದಾ ಹಸಿರಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮುಧೋಳ(ಬಿ) ಗ್ರಾಮದ ಶ್ರೀ ಚರಮೂರ್ತಿ ಮಠದ ಲಿಂ. ಶಿವಲಿಂಗ ಶ್ರೀಗಳವರ ಲಿಂಗಾಂಗ ಸಾಮರಸ್ಯದ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಹು ಜನ್ಮದ ಪುಣ್ಯ ಫಲದಿಂದ ಮಾನವ ಜನ್ಮ ಪ್ರಾಪ್ತವಾಗಿದೆ. ಅರಿವು ಆದರ್ಶ ಮತ್ತು ಆಚರಣೆಗಳ ಮೂಲಕ ಬದುಕನ್ನು ಕಟ್ಟಿಕೊಳ್ಳಬೇಕಾಗಿದೆ. ಹುಟ್ಟು ಎಷ್ಟು ಸಹಜವೋ ಸಾವು ಅಷ್ಟೇ ನಿಶ್ಚಿತ. ಹುಟ್ಟು ಸಾವುಗಳ ಮಧ್ಯದ ಬಾಳ ಬದುಕಿನ ಜವಾಬ್ದಾರಿ ಅವರವರದೇ ಆಗಿದೆ ಹೊರತು ಬೇರಾರಿಗೂ ಸಂಬಂಧವಿರುವುದಿಲ್ಲ. ಜೀವನ ತೆರೆದಿಟ್ಟ ಪುಸ್ತಕ. ಆ ಪುಸ್ತಕದ ಮೊದಲ ಪುಟದಲ್ಲಿ ಹುಟ್ಟು ಕೊನೆಯ ಪುಟದಲ್ಲಿ ಮೃತ್ಯು ಬರೆದಿಟ್ಟಿದ್ದಾನೆ. ಈ ಹುಟ್ಟು ಸಾವುಗಳ ಬಂಧನದಿಂದ ಮುಕ್ತಗೊಳಿಸುವುದೇ ವೀರಶೈವ ಧರ್ಮದ ಪರಮ ಗುರಿಯಾಗಿದೆ ಎಂದರು.



ಲಿಂಗಾಂಗ ಸಾಮರಸ್ಯ ಶತಮಾನೋತ್ಸವ ಸಮಾರಂಭದ ನೇತೃತ್ವ ವಹಿಸಿದ ಡಾ. ವೈಜನಾಥ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳು ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ಮಾತನಾಡಿ, ಚರಮೂರ್ತಿ ಮಠದ ಇತಿಹಾಸದಲ್ಲಿ ಇಂದಿನ ದಿನ ಅವಿಸ್ಮರಣೀಯ ದಿನ. ನಮ್ಮ ಪೂರ್ವಜರ ಬಹು ದಿನಗಳ ಕನಸು ನನಸಾದ ಸುದಿನ. ಲಿಂ. ಶಿವಲಿಂಗ ಶಿವಾಚಾರ್ಯರು ಲಿಂಗೈಕ್ಯರಾಗಿ ನೂರು ವರುಷ ಪೂರ್ಣಗೊಂಡ ಸಂದರ್ಭದಲ್ಲಿ ಶತಮಾನೋತ್ಸವ ಸಮಾರಂಭ ಹಮ್ಮಿಕೊಂಡಿರುವುದು ಭಕ್ತ ಸಂಕುಲಕ್ಕೆ ಸಂತೋಷ ತಂದಿದೆ. ಶ್ರೀ ರಂಭಾಪುರಿ ಪೀಠದ ಶಾಖಾ ಚರಮೂರ್ತಿಮಠ ಇದಾಗಿರುವುದರಿಂದ ಶ್ರೀ ರಂಭಾಪುರಿ ಜಗದ್ಗುರುಗಳವರ ಕೃಪಾಶೀರ್ವಾದ ನಮ್ಮೆಲ್ಲರ ಮೇಲಿರಲೆಂದು ಭಿನ್ನವಿಸಿದರು.

ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಮತ್ತು ಯಂಕಂಚಿಮಠದ ಅಭಿನವ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತವನ್ನಿತ್ತರು. ಹೆಡಗಾಪುರದ ಶಿವಲಿಂಗ ಶ್ರೀಗಳು, ಹಣೆಗಾಂವ ಶಂಕರಲಿಂಗ ಶ್ರೀಗಳು, ಹೆಡಗಾಪುರ ದಾರುಕಲಿಂಗ ಶ್ರೀಗಳು, ದೇವಣಿ ಸಿದ್ಧಲಿಂಗ ಶ್ರೀಗಳು, ಕೌಳಾಸ ಬಸವಲಿಂಗ ಶ್ರೀಗಳು ಉಪಸ್ಥಿತರಿದ್ದರು. ಔರಾದ್ ರವಿಸ್ವಾಮಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಶ್ರೀ ಶಿವಲಿಂಗೇಶ್ವರ ಮಹಿಳಾ ರುದ್ರ ಸಂಘದ ಸದಸ್ಯರಿಂದ ವೇದಘೋಷ, ವೀರಭದ್ರಯ್ಯ ಕಟ್ಟಿಸಂಗಾವಿ ಇವರಿಂದ ಪ್ರಾರ್ಥನಾ ಗೀತೆ ಜರುಗಿತು. ಜೇರಟಗಿ ಮಡಿವಾಳೇಶ್ವರ ಶಾಸ್ತ್ರಿಗಳು ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಅಲಂಕೃತ ಸಾರೋಟದ ಭವ್ಯ ಮೆರವಣಿಗೆಯೊಂದಿಗೆ ಬರಮಾಡಿಕೊಂಡರು. ಭಜನಾ ಸಂಘ, ವೀರಗಾಸೆ, ಕುಂಭ ಹೊತ್ತ ಮಹಿಳೆಯರು, ಆರತಿ ಹಿಡಿದ ಸುಮಂಗಲೆಯರು, ಡೊಳ್ಳು ಕಲಾವಿದರು ಮೆರವಣಿಗೆಗೆ ಮೆರಗು ತಂದರು.

ಸಮಾರಂಭ ಉದ್ಘಾಟಿಸಿದ ಬೀದರ ಸಂಸದ ಸಾಗರ ಖಂಡ್ರೆ ಮಾತನಾಡಿ, ಉಜ್ವಲ ಭವಿಷ್ಯಕ್ಕೆ ಧರ್ಮವೇ ದಿಕ್ಸೂಚಿ. ಮಾನವೀಯ ಮೌಲ್ಯಗಳನ್ನು ಅರಿತು ಬೆರೆತು ನಡೆದಾಗ ಬದುಕು ಸಾರ್ಥಕ. ಲಿಂ. ಶಿವಲಿಂಗ ಶ್ರೀಗಳವರ ಲಿಂಗಾಂಗ ಸಾಮರಸ್ಯ ಸಮಾರಂಭದ ಉದ್ಘಾಟನೆ ಮಾಡಿರುವುದು ಪೂರ್ವ ಜನ್ಮದ ಸುಕೃತವೆಂದರು. ಇದೇ ಸಂದರ್ಭದಲ್ಲಿ ಸ್ಮರಣ ಸಂಚಿಕೆ, ಕಾರುಣ್ಯ ಕುಸುಮ ಕೃತಿ ಬಿಡುಗಡೆಗೊಂಡವು.

## ಹಿಂದೂ-ಮುಸ್ಲಿಂ ಭಾವೈಕ್ಯತೆ ಮೆರೆದ ಮೊಹರಂ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಸಮಿಪದ ತಿಮ್ಮಾಪೂರ ಗ್ರಾಮದಲ್ಲಿ ಹಿಂದೂ ಮುಸ್ಲಿಂ ಭಾವೈಕ್ಯತೆಯ ಮೊಹರಂ ಹಬ್ಬವನ್ನು ಆಚರಿಸಲಾಯಿತು. ಈ ವರ್ಷ ಅಗ್ನಿ ಕುಂಡದಲ್ಲಿ ಕಂಬಳಿ ಹಾಸಿ ನಮಾಜ್ ಮಾಡಿ ಮೌಲ್ವಿಗಳು ಪ್ರಾರ್ಥನೆ ಸಲ್ಲಿಸಿದರು.

ಮೌಲ್ವಿಗಳ ಪ್ರಾರ್ಥನೆಗೆ ಭಕ್ತರು ಹರ್ಷೋದ್ಗಾರ ವ್ಯಕ್ತಪಡಿಸಿದರು. ತ್ಯಾಗ ಬಲಿದಾನದ ಸಂಕೇತವಾದ ಮೊಹರಂ ಹಬ್ಬವನ್ನು ಹಿಂದೂ-ಮುಸ್ಲಿಂ ಧರ್ಮದ ಬಂಧುಗಳು ಅಲೈ ದೇವರಿಗೆ ಹರಕೆಗಳನ್ನು ತೀರಿಸುವುದರ ಮೂಲಕ ಭ್ರಾತೃತ್ವ ಭಾವನೆ ಮೂಡಿಸಿದರು.



ಮೊಹರಂ ಹಬ್ಬದ ನಿಮಿತ್ತ ಅಲೈ ದೇವರ ಸೇವಕರಾಗಿ ಫಕೀರ ನಾಗುವದ್ದು ಮತ್ತು ಹುಲಿ ವೇಷ, ಕರಡಿ ವೇಷ, ಕಳ್ಳಿ ವೇಷ ಧರಿಸಿ ಐದು ದಿನಗಳ ಕಾಲ ಸೇವೆಯನ್ನು ಸಲ್ಲಿಸುತ್ತಾರೆ. ಗ್ರಾಮದ ಅನೇಕ ಸಂಘ-ಸಂಸ್ಥೆಗಳ ಯುವಕರು ಕೋಲಾಟ ಆಡುವುದು, ಹೆಜ್ಜೆ ಹಾಕುವುದು, ರಿವಾಯಿತಿ ಪದಗಳನ್ನು ಹಾಡಿ ಸಂಭ್ರಮಿಸಿದರು.

ಮಹಿಳೆಯರು ದೊಲಿಗೆ ಬೆಲ್ಲದಚ್ಚುಗಳನ್ನು ಎಸೆಯುವುದು, ಯುವಕರು ಅಲ್ಲೇದ ಕುಣಿ ಹತ್ತಿರ ನೀರನ್ನು ಹಾಕಿ ರಾಡಿ ಮಾಡಿ ಪರಸ್ಪರ ಒಬ್ಬರಿಗೊಬ್ಬರು ರಾಡಿಯನ್ನು ಮೈಗೆ ಸವರಿಕೊಳ್ಳುವದು ಇಲ್ಲಿ ಇದೊಂದು ವಿಶೇಷ ಆಚರಣೆಯಾಗಿದೆ.

## ಸಂಭ್ರಮದ ಮೊಹರಂ ಆಚರಣೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬುಧವಾರ ಪಟ್ಟಣದಲ್ಲಿ ಹಿಂದೂ-ಮುಸ್ಲಿಂ ಬಾಂಧವರು ಸಡಗರ ಸಂಭ್ರಮದಿಂದ ಮೊಹರಂ ಹಬ್ಬವನ್ನು ಆಚರಣೆ ಮಾಡಿದರು.

12 ಗಂಟೆಯ ಹೊತ್ತಿಗೆ ದಾವಲ್ ಮಲ್ಲಿಕ್ ಪಹಡದ ದೇವರು ಹಾಗೂ ಜುಮ್ಮಾ ಮಸೀದಿ ದೇವರು ಭೇಟಿ ನೀಡುತ್ತಿದ್ದಂತೆ ಆಗಮಿಸಿದ ಸಾವಿರಾರು ಹಿಂದೂ-ಮುಸ್ಲಿಂ ಭಕ್ತರು ಹರ್ಷೋದ್ಗಾರದಿಂದ, ಭಕ್ತಿ ಭಾವದಿಂದ ನಮಸ್ಕರಿಸಿ ತಮ್ಮ ಇಷ್ಟಾರ್ಥಗಳನ್ನು ಬೇಡಿಕೊಂಡು ಪುನೀತರಾದರು.

### ಡಾ. ಫ.ಗು. ಹಳಕಟ್ಟಿಯವರ ಜಯಂತಿ ಕಾರ್ಯಕ್ರಮದಲ್ಲಿ ಪ್ರೊ. ಚಂದ್ರಪ್ಪ ಬಾರಂಗಿ

## ವಚನ ಸಾಹಿತ್ಯ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿ

■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ಕಲ್ಯಾಣ ನಾಡಿನಲ್ಲಿ ಅಸಂಖ್ಯಾತ ಶರಣರು ಲೋಕಕಲ್ಯಾಣ ಮಾರ್ಗವನ್ನು ಅನುಸರಿಸಿ ಮಿಂಚಿ ಮರೆಯಾದರು. ಆ ಶರಣರ ಅನೇಕ ವಚನಗಳು, ಅನೇಕ ಮಠಗಳಲ್ಲಿ, ಹಲವರ ಮನೆಗಳಲ್ಲಿ ಪೂಜೆಗೊಳ್ಳುತ್ತ ಕೇವಲ ಉತ್ಸವ ಮೂರ್ತಿಗಳಾಗಿದ್ದವು. ಅಂಥವುಗಳನ್ನು ಮೊದಲು ಕಂಡು ನೊಂದವರು ವಚನ ಪಿತಾಮಹ ಶರಣ ಡಾ. ಫಕೀರಪ್ಪ ಹಳಕಟ್ಟಿಯವರು ಎಂದು ಕರ್ನಾಟಕ ರಾಜ್ಯ ಪಂಚಾಯತ್ ಹಾಗೂ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಪ್ರೊ. ಚಂದ್ರಪ್ಪ ಬಾರಂಗಿ ಅಭಿಪ್ರಾಯಪಟ್ಟರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಜಿಲ್ಲಾ ಕದಳಿ ಮಹಿಳಾ ವೇದಿಕೆ, ತಾಲೂಕ ಶರಣ ಸಾಹಿತ್ಯ ಪರಿಷತ್ತು, ತಾಲೂಕಾ ಕದಳಿ ಮಹಿಳಾ ವೇದಿಕೆ ಇವುಗಳ ಸಂಯುಕ್ತಾಶ್ರಯದಲ್ಲಿ ವಚನ ಸಂಶೋಧನೆಯ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.




ದತ್ತಿ ದಾನಿಗಳಾದ ಸುರೇಶ ಅಂಗಡಿಯವರ ಸಹೋದರಿ ಜಯಶ್ರೀ ಪಟ್ಟಣಶೆಟ್ಟಿಯವರು ತಮ್ಮ ತಂದೆಯವರು ಬದುಕಿನಲ್ಲಿ ಸಾಧಿಸಿದ ಮತ್ತು ಕಷ್ಟದ ದಿನಗಳನ್ನು ನೆನೆಯುತ್ತಾ, ಇಂತಹ ಕಷ್ಟದಲ್ಲಿಯೂ ಅನೇಕ ಜನರಿಗೆ ಸಹಾಯ ಮಾಡುತ್ತಾ ಹಲವರಿಗೆ ಉದ್ಯೋಗವನ್ನು ನೀಡಿದ ಮಹಾನುಭಾವರು ಎಂದರು.

ಇಡೀ ಜಗತ್ತು ಒಂದೇ ಎನ್ನುವ ಭಾವನೆಯನ್ನು ಅತ್ಯಂತ ಸುಂದರ, ಸರಳ ಭಾಷೆಯಲ್ಲಿ ಕನ್ನಡಕ್ಕೆ ಪರಿಚಯ ಮಾಡಿಕೊಟ್ಟವರು ಹಳಕಟ್ಟಿಯವರು. ಜಗತ್ತಿನ ಎಲ್ಲ ಸಮಸ್ಯೆಗಳಿಗೆ ವಚನಗಳಲ್ಲಿ ಪರಿಹಾರವಿದೆ. ಫ.ಗು. ಹಳಕಟ್ಟಿಯವರು ಸಂಶೋಧಕರಾಗಿ, ಗ್ರಂಥ ಸಂಪಾದಕರಾಗಿ, ಹಸ್ತಪ್ರತಿಗಳ ಪರೀಕ್ಷಕರಾಗಿ ಹೀಗೆ ನಾನಾ ಕ್ಷೇತ್ರಗಳಲ್ಲಿ ಕೆಲಸ ಮಾಡಿದರು. ಎಲ್ಲೋ ಒಂದು ಹಸ್ತಪ್ರತಿ ಲಭ್ಯವಾದರೆ ಅದನ್ನು ಪರಿಶೀಲಿಸಿ, ಕ್ರಮಬದ್ಧವಾಗಿ ಸಂಪಾದನೆ ಮಾಡುತ್ತಿದ್ದರು ಮತ್ತು ಅದರ ಅನೇಕ ಪಾಠಾಂತರಗಳನ್ನು ಪರಿಶೀಲಿಸುತ್ತಿದ್ದರು ಎಂದರು.

ಸುರೇಶ ಅಂಗಡಿ ಸಾಂದರ್ಭಿಕವಾಗಿ ಮಾತನಾಡಿದರು. ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಡಾ. ರಾಜಶೇಖರ ದಾನರೆಡ್ಡಿಯವರು ಪ್ರಾಚಾರ್ಯರಾದ ನಿಮಿತ್ತ ಚನ್ನಬಸಪ್ಪ ಕಂಠಿಯವರು ಸನ್ಮಾನಿಸಿದರು. ಆರಂಭದಲ್ಲಿ ಶರಣ ವೀರನಗೌಡ ವಚನ ಸಂಗೀತ ಹಾಡಿದರೆ, ಕದಳಿ ಮಹಿಳಾ ವೇದಿಕೆಯ ಗೌರವಾಧ್ಯಕ್ಷರಾದ ರತ್ನಕ್ಕ ಪಾಟೀಲ ಸ್ವಾಗತಿಸಿದರು. ಪ್ರೊ. ಶಿವಾನಂದ ಹೊಂಬಳ ಹಳಕಟ್ಟಿಯವರ ಕುರಿತಾಗಿರುವ ಹಾಡನ್ನು ಪ್ರಸ್ತುತಪಡಿಸಿದರು. ಕದಳಿ ಮಹಿಳಾ ವೇದಿಕೆ ಜಿಲ್ಲಾಧ್ಯಕ್ಷರಾದ ಸುಧಾ ಹುಚ್ಚಣ್ಣವರ ವಂದಿಸಿದರು.

ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶರಣ ಪ್ರಕಾಶ ಅಸುಂಡಿ ಕಾರ್ಯಕ್ರಮ ನಿರೂಪಿಸಿದರು. ವಚನ ಮಂಗಳವನ್ನು ಶರಣೆ ಮಂಜುಳಾ ಹಾಸಿಲಕರ ಮಾಡಿದರು. ಕಾರ್ಯಕ್ರಮದಲ್ಲಿ ಶರಣರಾದ ಶೇಖಣ್ಣ ಕಳಸಾಪೂರಶೆಟ್ರ, ಶೇಖಣ್ಣ ಕವಳಿಕಾಯಿ, ರಾಚಪ್ಪ ಚವಡಿ, ಬಸವರಾಜ ಹಿರೇಹಡಗಲಿ, ಮಹಾಂತೇಶ ಅಂಗಡಿ, ಎಂ.ಬಿ. ಲಿಂಗದಾಳ, ಎಸ್.ಬಿ. ಸೋಮಗೊಂಡ, ಜಿ.ಆರ್. ಕದಂ, ಸಂಗಪ್ಪ ಪೂಜಾರ, ಭೋಸಲೆ, ಬಸವದಳದ ಅಧ್ಯಕ್ಷ ವ್ಹಿ.ಕೆ. ಕರೇಗೌಡ್ರ, ಎಸ್.ಎ. ಮುಗದ, ಪಿ.ಟಿ. ನಾರಾಯಣಪೂರ, ಪ್ರಾ. ಬಿ.ಬಿ. ಪಾಟೀಲ, ಪ್ರೇಮಾ ಮೇಟಿ, ಶರಣೆಯರಾದ ರೇಣುಕಾ ಹಾಸಲಕರ, ಪುಷ್ಪಾ ಭಂಡಾರಿ, ಲಕ್ಷ್ಮೀ ಅಂಗಡಿ, ಗಿರಿಜಾ ಅಂಗಡಿ, ನಿರ್ಮಲಾ ಪಾಟೀಲ, ಶಾಂತಾ ಮುಂದಿನಮನಿ, ಅನ್ನಪೂರ್ಣಾ ವರವಿ, ರೇಣುಕಾ ಕರೇಗೌಡ್ರ ಮುಂತಾದವರು ಉಪಸ್ಥಿತರಿದ್ದರು.

## 'ಚಂಡಿಪುರ ವೈರಸ್'ನಿಂದ 4 ವರ್ಷದ ಮಗು ಬಲಿ, 14 ಜನ ಸಾವನ್ನಪಿರುವ ಶಂಕೆ

■ವಿಜಯಸಾಕ್ಷಿ ಸುದ್ದಿ, ಗುಜರಾತ್



ಕೇರಳದಲ್ಲಿ ಮೆದುಳು ತಿನ್ನುವ ಅಮೀಬಾ ನಂತರ, ಗುಜರಾತ್‌ನಲ್ಲಿ 'ಚಂಡಿಪುರಾ ವೈರಸ್'ಗೆ ನಾಲ್ಕು ವರ್ಷದ ಬಾಲಕಿ ಬಲಿಯಾಗಿದ್ದಾಳೆ ಎಂದು ಎಂದು ಆರೋಗ್ಯ ಇಲಾಖೆಯ ಅಧಿಕಾರಿಯೊಬ್ಬರು ಬುಧವಾರ ತಿಳಿಸಿದ್ದಾರೆ.

ರಾಜ್ಯದಲ್ಲಿ ಇನ್ನೂ 14 ರೋಗಿಗಳು ಸೋಂಕಿನಿಂದ ಸಾವನ್ನಪ್ಪಿದ್ದಾರೆ ಎಂದು ಶಂಕಿಸಲಾಗಿದೆ, ಇದು ಜ್ವರವನ್ನು ಉಂಟುಮಾಡುವ ವೈರಸ್‌ನ 29 ಪ್ರಕರಣಗಳನ್ನು ವರದಿ ಮಾಡಿದೆ, ಜ್ವರದಂತೆಯೇ ರೋಗಲಕ್ಷಣಗಳು ಮತ್ತು ತೀವ್ರವಾದ ಮೆದುಳಿನ ಉರಿಯೂತ ಆಗುತ್ತದೆ ಎಂದು ತಿಳಿದುಬಂದಿದೆ.

"ಸಬರ್ಕಾಂತ ಜಿಲ್ಲೆಯ ಹಿಮತ್‌ನಗರದ ಸಿವಿಲ್ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ ಅರಾವಳಿ ಜಿಲ್ಲೆಯ ಮೋಟಾ ಕಾಂತರಿಯಾ ಗ್ರಾಮದ ನಾಲ್ಕು ವರ್ಷದ ಬಾಲಕಿಯ ಮಾದರಿಯು ಚಂಡಿಪುರ ವೈರಸ್‌ಗೆ ಪಾಸಿಟಿವ್ ಇರುವುದನ್ನು ಪರೀಕ್ಷೆ ದೃಢಪಡಿಸಿದೆ. ಇದು ರಾಜ್ಯದಲ್ಲಿ ಚಂಡಿಪುರ ವೈರಸ್ ಸೋಂಕಿನಿಂದ ಸಂಭವಿಸಿದ ಮೊದಲ ಸಾವು" ಎಂದು ಸಬರಕಾಂತ ಮುಖ್ಯ ಜಿಲ್ಲಾ ಆರೋಗ್ಯ ಅಧಿಕಾರಿ (ಸಿಡಿಎಚ್‌ಒ) ರಾಜ್ ಸುತಾರಿಯಾ ಹೇಳಿದ್ದಾರೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

## ರೈತನಿಗೆ ಅವಮಾನ: ಏಳು ದಿನಗಳ ಕಾಲ ಜಿಟಿ ಮಾಲ್ ಮುಚ್ಚಿಸಲು ರಾಜ್ಯ ಸರ್ಕಾರ ನಿರ್ಧಾರ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು




ಪಂಚೆ ತೊಟ್ಟ ರೈತನಿಗೆ ಪ್ರವೇಶ ನಿರಾಕರಣೆ ಮಾಡಿ ಅವಮಾನಿಸಿದ ಬೆಂಗಳೂರಿನ ಮಾಗಡಿ ರಸ್ತೆಯ ಜಿಟಿ ಮಾಲ್ ಅನ್ನು ಏಳು ದಿನಗಳ ಕಾಲ ಮುಚ್ಚಿಸಲು ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

ಇಂದು (ಜುಲೈ 18) ಸದನದಲ್ಲಿ ಜಿಟಿ ಮಾಲ್‌ನಲ್ಲಿ ರೈತನಿಗೆ ಅವಮಾನ ಮಾಡಿರುವ ವಿಚಾರ ಚರ್ಚೆಗೆ ಕಾರಣವಾಯಿತು. ಜಿಟಿ ಮಾಲ್ ಒಳಗೆ ಪಂಚೆ ಉಟ್ಟ ರೈತನನ್ನು ಬಿಡದೆ ಅವಮಾನಿಸಿದ ವಿಚಾರವಾಗಿ ಸಭಾಧ್ಯಕ್ಷ ಯು ಟಿ ಖಾದರ್ ಅವರು ಕೋಪಗೊಂಡರು. "ರೈತನಿಗೆ ಅವಮಾನ ಮಾಡಿದವನು ಎಷ್ಟೇ ದೊಡ್ಡವನಿರಲಿ, ಅವಮಾನ ಮಾಡಿದ್ದನ್ನು ಖಂಡಿಸಬೇಕು. ಸರ್ಕಾರ ಕಠಿಣ ಕ್ರಮ ಜರುಗಿಸಬೇಕು" ಎಂದು ಆಗ್ರಹಿಸಿದರು.

ಸ್ಪೀಕರ್ ಮಾತಿಗೆ ಧ್ವನಿಗೂಡಿಸಿದ ಶಾಸಕ ಲಕ್ಷ್ಮಣ ಸವದಿ, "ಎಲ್ಲಾ ಮಾಲ್‌ಗಳಿಗೂ ಒಂದೇ ನಿಯಮ ಮಾಡಬೇಕು. ಪಂಚೆ ನಮ್ಮ ಸಂಸ್ಕೃತಿ. ಸರ್ಕಾರದಿಂದ ಒಂದು ಆದೇಶ ಹೊರಡಿಸಲಿ, ಆ ಮಾಲ್‌ಗೆ ವಾರಗಳ ಕಾಲ ಪವರ್ ಕಟ್ ಮಾಡಲಿ" ಎಂದು ಒತ್ತಾಯಿಸಿದರು.

ಶಾಸಕ ಪ್ರಕಾಶ್ ಕೋಳಿವಾಡ ಕೂಡ ಎದ್ದು ನಿಂತು, "ರೈತನಿಗೆ ಅವಮಾನ ಮಾಡಿದ ಆ ಮಾಲ್ ಅನ್ನು ಮುಚ್ಚಬೇಕು" ಎಂದು ಆಗ್ರಹಿಸಿದರು.

## ಜುಲೈ 20ರಂದು ನೀಟ್-ಯುಜಿ ಫಲಿತಾಂಶ ಪ್ರಕಟಿಸಲು ಎನ್‌ಟಿಎಗೆ ಸುಪ್ರೀಂ ನಿರ್ದೇಶನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ನೀಟ್-ಯುಜಿ ಪರೀಕ್ಷೆ 2024ರ ಫಲಿತಾಂಶಗಳನ್ನು ಜುಲೈ 20ರ ಮಧ್ಯಾಹ್ನ 12 ಗಂಟೆಯೊಳಗೆ ತನ್ನ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಗೆ ಸುಪ್ರೀಂ ಕೋರ್ಟ್ ಇಂದು(ಜು 18) ನಿರ್ದೇಶನ ನೀಡಿದೆ.

ಅಭ್ಯರ್ಥಿಗಳ ಗುರುತನ್ನು ಬಹಿರಂಗಪಡಿಸಬಾರದು. ನಗರವಾರು ಮತ್ತು ಕೇಂದ್ರವಾರು ಫಲಿತಾಂಶಗಳನ್ನು ಪ್ರಕಟಿಸಬೇಕು ಎಂದು ನ್ಯಾಯಾಲಯ ಆದೇಶಿಸಿದೆ.



ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಇತರ ಅವ್ಯವಹಾರಗಳ ಆರೋಪಗಳ ಹಿನ್ನೆಲೆ ನೀಟ್-ಯುಜಿ 2024 ಪರೀಕ್ಷೆಯನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರನ್ನೊಳಗೊಂಡ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ನೇತೃತ್ವದ ಪೀಠವು ಈ ಆದೇಶ ನೀಡಿದೆ.

ಎನ್‌ಟಿಎ ಎಲ್ಲಾ ಅಭ್ಯರ್ಥಿಗಳ ಫಲಿತಾಂಶವನ್ನು ಪ್ರಕಟಿಸದ ಕಾರಣ ಕೇಂದ್ರವಾರು ಅಂಕಗಳ ಮಾದರಿಯನ್ನು ಖಚಿತಪಡಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಅರ್ಜಿದಾರರು ದೂರಿರುವ ಹಿನ್ನೆಲೆ, ಮುಂದಿನ ವಿಚಾರಣೆಯನ್ನು ಸೋಮವಾರಕ್ಕೆ ಮುಂದೂಡಿದ ನ್ಯಾಯಾಲಯ, ಫಲಿತಾಂಶಗಳನ್ನು ಪ್ರಕಟಿಸುವಂತೆ ಎನ್‌ಟಿಎಗೆ ಸೂಚಿಸಿದೆ.

ಅರ್ಜಿದಾರರ ಪರ ನ್ಯಾಯಾಲಯಕ್ಕೆ ಹಾಜರಾದ ಹಿರಿಯ ವಕೀಲ ನರೇಂದ್ರ ಹೂಡಾ, ಸಿಬಿಐ ಸ್ಥಿತಿ ವರದಿಯನ್ನು ಅವರೊಂದಿಗೆ ಹಂಚಿಕೊಳ್ಳದ ಕಾರಣ ಅಥವಾ ಸಂಪೂರ್ಣ ಫಲಿತಾಂಶಗಳನ್ನು ಪ್ರಕಟಿಸದ ಕಾರಣ ಅಭ್ಯರ್ಥಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದ್ದಾರೆ.

### ಹೊಂಬಳದಲ್ಲಿ ಕವಿ, ಸಾಹಿತಿ ಚನ್ನವೀರ ಕಣವಿ ಅವರ ಕುರಿತ ಕಾರ್ಯಕ್ರಮ

# ಕಣವಿಯವರ ಜೀವನವೇ ಸಮನ್ವಯದ ಕಾವ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಹೊಂಬಳದ ಈ ನೆಲದಲ್ಲಿ ಹುಟ್ಟಿ ಬೆಳೆದ ಚನ್ನವೀರ ಕಣವಿಯವರು ಸಾಹಿತ್ಯದ ಮೇರು ಶಿಖರವಾದದ್ದು ಅವರ ಪರಿಶ್ರಮದ ಮೂಲಕ. ಅವರು ನಡೆದಾಡಿದ ಈ ನೆಲದಲ್ಲಿ ನಾವು ಕಾರ್ಯ ನಿರ್ವಹಿಸುತ್ತಿರುವುದು ತಮ್ಮ ಸೌಭಾಗ್ಯ. ಅವರು ಹುಟ್ಟಿದ ಈ ನೆಲದಲ್ಲಿ ಅವರ ಹೆಸರಿನಲ್ಲಿ ಒಂದು ಗ್ರಂಥಾಲಯವನ್ನು ಸ್ಥಾಪಿಸಲು ಪ್ರಯತ್ನಿಸುವುದಾಗಿ ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಗದಗ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಹೊಂಬಳದ ಸರಕಾರಿ ಪ್ರೌಢಶಾಲೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಹೊಂಬಳದ ಸರಕಾರಿ ಪ್ರೌಢಶಾಲೆಯಲ್ಲಿ 'ಚಂಬೆಳಕಿನ ಕವಿ–ಚನ್ನವೀರ ಕಣವಿ : ಜೀವನ ಮತ್ತು ಕಾವ್ಯ' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಶಿಕ್ಷಕ ಈಶ್ವರ ಕುರಿ ಮಾತನಾಡಿ, ಬಾಲ್ಯದಲ್ಲಿ ಎಲ್ಲರಂತೆ ಸಹಜರಾಗಿ ಬೆಳೆದ ಕಣವಿಯವರು ತಮ್ಮ ಪ್ರೌಢಾವಸ್ಥೆಯಲ್ಲಿ ಸಾಹಿತ್ಯ ರಚನೆಯಲ್ಲಿ ತೊಡಗಿಕೊಂಡರು. ತಮ್ಮ ಪದವಿ ಮತ್ತು ಸ್ನಾತಕೋತ್ತರ ಶಿಕ್ಷಣದ ಸಮಯದಲ್ಲೂ ಅವರ ಸುತ್ತಲೂ ಸಾಹಿತ್ಯದ ಸಹಚಾರವೇ ಮೇಳೈಸುತ್ತಿತ್ತು. ಅವರ ಶಾಂತ ಸ್ವಭಾವದಂತೆ ಅವರ ಕಾವ್ಯವೂ ಶಾಂತವಾಗಿಯೇ ಮೂಡಿಬಂದಿದೆ ಎಂದರಲ್ಲದೆ, ಸಾಹಿತಿ ದಂಪತಿಗಳಾಗಿ ಕನ್ನಡ ಸಾಹಿತ್ಯ ಪರಿಸರದಲ್ಲಿ ಗುರುತಿಸಿಕೊಂಡ ಚನ್ನವೀರ ಕಣವಿ ಮತ್ತು ಶಾಂತಾದೇವಿ ಕಣವಿ ಅವರ ಅನ್ಯೋನ್ಯತೆಯನ್ನು ತಿಳಿಸಿದರು.



> ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಉತ್ತರ ಕರ್ನಾಟಕದ ಭಾಗದಲ್ಲಿ ಕಾಲಕಾಲಕ್ಕೆ ಪ್ರಮುಖ ಕವಿಗಳು ತಮ್ಮದೇ ಆದ ವಿಶಿಷ್ಟ ಕೊಡುಗೆಯನ್ನು ಕೊಟ್ಟಿದ್ದಾರೆ. ಜಗತ್ತಿನ ಸಾಹಿತ್ಯದಲ್ಲಿ ಕನ್ನಡದ ಗೌರವವನ್ನು ಹೆಚ್ಚಿಸುವ ಕಾರ್ಯ ಅವರಿಂದ ಸಾಧ್ಯವಾಗಿದೆ. ನವೋದಯ–ನವ್ಯ ಕಾಲಘಟ್ಟದಲ್ಲೂ ಉತ್ತರ ಕರ್ನಾಟಕದ ಕೊಡುಗೆ ಅನುಪಮ. ಅವರಲ್ಲಿ ಚಂಬೆಳಕಿನ ಕವಿ ಎಂದೇ ಗುರುತಿಸಲ್ಪಡುವ ಚನ್ನವೀರ ಕಣವಿ ಅವರ ಪಾತ್ರ ಬಹು ದೊಡ್ಡದು ಎಂದರು.

ಕಾರ್ಯಕ್ರಮದಲ್ಲಿ ಶಾಲೆಯ ದಿದ್ದಿಮನಿ, ಮಖ್ಯೋಪಾಧ್ಯಾಯ ಎಸ್‌ಡಿಎಮ್‌ಸಿ ಅಧ್ಯಕ್ಷ ಶರಣಪ್ಪ ಎಂ.ವಿ. ಪಾಟೀಲ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ತಾಲೂಕಾ ಕಸಾಪ ಅಧ್ಯಕ್ಷರಾದ ಡಾ. ರಶ್ಮಿ ಅಂಗಡಿ ಮಾತನಾಡಿದರು.

ವೇದಿಕೆಯಲ್ಲಿ ಗದಗ ಬೆಟಗೇರಿ ಇನ್ನರ್‌ವೀಲ್‌ನ ಪಿ.ಡಿ.ಸಿ ಪ್ರೇಮಾ ಗುಳಗೌಡರ ಮತ್ತು ಹೊಂಬಳ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಲಲಿತಾ ಹುಣಶೀಕಟ್ಟಿ ಹಾಜರಿದ್ದರು. ಕಾರ್ಯಕ್ರಮವನ್ನು ಗದಗ ತಾಲೂಕಾ ಕಸಾಪ ಕಾರ್ಯದರ್ಶಿ ವಿಶ್ವನಾಥ ಬೇಂದ್ರೆ ನಿರೂಪಿಸಿದರು. ತಾಲೂಕಾ ಕಸಾಪ ಕೋಶಾಧ್ಯಕ್ಷರಾದ ಪಾರ್ವತಿ ಬೇವಿನಮರದ ನಿರ್ವಹಿಸಿ ವಂದಿಸಿದರು.

ಹಿರಿಯ ಶಿಕ್ಷಕಿಯರಾದ ವಿ.ಆರ್. ಜಂಗಮನಿ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳಾದ ಸೌಮ್ಯ ಹಾಲನವರ್, ಸೌಮ್ಯ ಮಲ್ಲಾಪೂರ, ರಿಜ್ವಾನ್ ಕಲೇಬಾಯಿ, ಮಲ್ಲಮ್ಮ ಯಲಬುರ್ಗಿ, ಸುಜಾತಾ ಅಣ್ಣಿಗೇರಿ ಮತ್ತು ತಂಡದವರಿಂದ ಚನ್ನವೀರ ಕಣವಿ ಅವರ ಹಲವಾರು ಗೀತೆಗಳು ಮೂಡಿ ಬಂದವು. ಶಾಲೆಯ ಬೋಧಕ ಮತ್ತು ಬೋದಕೇತರ ಸಿಬ್ಬಂದಿಗಳು, ಸುರೇಶ ಬಳಗಾರ, ಪ್ರಣವ ಮಹಾಂತ ಬಳಗಾರ ಕಾರ್ಯಕ್ರಮದಲ್ಲಿ ಹಾಜರಿದ್ದರು.

### ನಗರೇಶ್ವರ ದೇವಸ್ಥಾನ ನಿರ್ಮಾಣದಲ್ಲಿ ಪಾಲ್ಗೊಂಡ ವಿವಿಧ ಕಾರ್ಮಿಕರಿಗೆ ಸನ್ಮಾನ

# ದೇವಸ್ಥಾನದ ನಿರ್ಮಾಣಕ್ಕೆ ಕಾರ್ಮಿಕರ ಶ್ರಮ ಕಾರಣ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ನಗರೇಶ್ವರ ದೇವಸ್ಥಾನದ ನಿರ್ಮಾಣ ಕಾರ್ಯದಲ್ಲಿ ಎಲ್ಲಾ ವರ್ಗದ ಕಾರ್ಮಿಕರು ಶ್ರಮ ವಹಿಸಿದ ಕಾರಣ ದೇವಸ್ಥಾನವು ಅತ್ಯಂತ ಸುಂದರವಾಗಿ ನಿರ್ಮಾಣಗೊಂಡಿದೆ ಎಂದು ಪಟ್ಟಣದ ಆರ್ಯವೈಶ್ಯ ಸಮಾಜದ ಅಧ್ಯಕ್ಷ ರಾಮಚಂದ್ರಪ್ಪ ನವಲಿ ಹೇಳಿದರು.

ಅವರು ದೇವಸ್ಥಾನದ ನಿರ್ಮಾಣ ಕಾರ್ಯದಲ್ಲಿ ಶ್ರಮ ವಹಿಸಿದ ಎಲ್ಲ ಮೇಸ್ತ್ರಗಳನ್ನು, ಕಾರ್ಮಿಕರನ್ನು ದೇವಸ್ಥಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಮಾತನಾಡಿದರು.

ವರ್ಷದ ಹಿಂದೆ ಆರಂಭವಾದ ದೇವಸ್ಥಾನದ ನಿರ್ಮಾಣ ಕಾಮಗಾರಿಗೆ ಪಟ್ಟಣದ ಎಲ್ಲ ಸಮಾಜದ ಗುರುಹಿರಿಯರು, ಯುವಕರು ಸಹಕಾರ ನೀಡಿದ್ದಾರೆ. ಎಲ್ಲರೂ ತಮಗೆ ನೀಡಿದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದಾರೆ. ಬೇರೆ ಊರುಗಳಿಂದ ಬಂದ ಭಕ್ತರು ದೇವಸ್ಥಾನದ ನಿರ್ಮಾಣದ ಕುರಿತು, ದೇವಸ್ಥಾನದಲ್ಲಿ ನಿರ್ಮಾಣಗೊಂಡಿರುವ ಶಾಂತತೆ ಬಗ್ಗೆ ಹೊಗಳುತ್ತಿದ್ದಾರೆ. ಇದರ ಕೀರ್ತಿ ಶ್ರಮಿಕ ವರ್ಗದ ಎಲ್ಲಾ ಕಾರ್ಮಿಕರಿಗೆ, ಮೇಸ್ತ್ರಿಗಳಿಗೆ ಸೇರಬೇಕು ಎಂದರು.

ಕಾರ್ಮಿಕರಾದ ಗುಡದಪ್ಪ ಗೋಡಿ, ಪೀರಸಾಬ್ ರಾಹುತ್, ಶೇಖಪ್ಪ ಮಣ್ಣೊಡ್ಡರ, ರವಿ ನವಲಗುಂದ, ಕಳಕಪ್ಪ ಹುಯಿಲಗೋಳ, ವೀರಣ್ಣ ಗುಜಮಾಗಡಿ ಸೇರಿದಂತೆ ಎಲ್ಲಾ ಶ್ರಮಿಕ ವರ್ಗದ ಕಾರ್ಮಿಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಆರ್ಯವೈಶ್ಯ ಸಮಾಜದ ಕಾರ್ಯದರ್ಶಿ ಚಂದ್ರಹಾಸ ಇಲ್ಲೂರ, ನಾಗೇಶ ಗುಡಿಸಾಗರ, ಸುರೇಶ ನವಲಿ, ವಿಜಯಕೃಷ್ಣ ನವಲಿ, ಚಂದ್ರಹಾಸ ಇಂಗಳಹಳ್ಳಿ, ಅಶೋಕ ನವಲಿ, ಮಹಾದೇವಪ್ಪ ಇಲ್ಲೂರ, ರಾಜೇಂದ್ರ ದೇವರಂಗಡಿ, ಮಹೇಶ ನವಲಿ, ರಾಮಚಂದ್ರ ಬೆಟದೂರ, ಚಂದ್ರಾವತಿ ಚಿನ್ನಿ, ಬಸವರಾಜ ಹೇಮಾದ್ರಿ, ಶ್ರೀನಿವಾಸ ಜಂತ್ಲಿ, ವೆಂಕಟೇಶ ಕಣವಿಹಳ್ಳಿ, ಹನಮಂತಪ್ಪ ಬಿಜಾಪುರ ಇದ್ದರು.

## ಉತ್ತಮ ಸಂಸ್ಕಾರಗಳೊಂದಿಗೆ ಮುನ್ನಡೆಯಿರಿ




■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತಮ ಪರಿಸರದಲ್ಲಿ ಬೆಳೆದ ವ್ಯಕ್ತಿತ್ವಯ ವ್ಯಕ್ತಿತ್ವವು ಉತ್ತಮ ಭವಿಷ್ಯಕ್ಕೆ ದಾರಿದೀಪವಾಗಬಲ್ಲದು ಎಂದು ಸರ್ಕಾರಿ ಪ್ರಥಮದರ್ಜೆ ಮಹಿಳಾ ಮಹಾವಿದ್ಯಾಲಯದ ಪ್ರಾ. ಎಂ.ಯು. ಹಿರೇಮಠ ಅಭಿಪ್ರಾಯಪಟ್ಟರು.

ಇತ್ತೀಚೆಗೆ ಸ್ಥಳೀಯ ಪಂಡಿತ ಪಂಚಾಕ್ಷರ ಗವಾಯಿಗಳವರ ಕಲಾ ಮಹಾವಿದ್ಯಾಲಯದ 2023–24ನೇ ಸಾಲಿನ ಸಾಂಸ್ಕೃತಿಕ ಕ್ರೀಡೆ, ಎನ್.ಎಸ್.ಎಸ್. ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಶ್ರೀ ವಿರೇಶ್ವರ ಪುಣ್ಯಾಶ್ರಮ ಉತ್ತಮ ಸಂಸ್ಕಾರಗಳನ್ನು ನೀಡುವ ಕ್ಷೇತ್ರವಾಗಿದ್ದು, ಇದಕ್ಕೆ ಪಂಡಿತ ಪಂಚಾಕ್ಷರ ಹಾಗೂ ಪುಟ್ಟರಾಜ ಗವಾಯಿಗಳರವರು ಅಡಿಪಾಯ ಹಾಕಿದ್ದಾರೆ. ಅದನ್ನು ಪೂಜ್ಯ ಕಲ್ಲಯ್ಯಜ್ಜನವರು ಮುಂದುವರೆಸಿಕೊಂಡು ಹೋಗುತ್ತಿದ್ದು, ಒಟ್ಟಾರೆ ಉತ್ತಮ ಸಂಸ್ಕಾರ ನೀಡುವ ಪುಣ್ಯಾಶ್ರಮವಾಗಿದೆ. ಪುಟ್ಟರಾಜ ಗವಾಯಿಗಳರವರಿಂದ ಸ್ಥಾಪಿಸಿದ ಪಂಡಿತ ಪಂಚಾಕ್ಷರ ಗವಾಯಿಗಳರವರ ಕಲಾ ಮಹಾವಿದ್ಯಾಲಯದಲ್ಲಿ ಓದಿದ ವಿದ್ಯಾರ್ಥಿಗಳು ಸಮಾಜದಲ್ಲಿ ಉತ್ತಮ ಸಂಸ್ಕಾರ ಬೆಳೆಸಿಕೊಂಡು ಆದರ್ಶ ಬದುಕನ್ನು ಕಟ್ಟಿಕೊಂಡಿದ್ದಾರೆಂದು ಹೇಳಿದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಪೂಜ್ಯ ಕಲ್ಲಯ್ಯಜ್ಜನವರು ಮಾತನಾಡಿ, ಮುಂದೆ ಗುರಿ ಇರಬೇಕು ಹಿಂದೆ ಗುರು ಇರಬೇಕು. ಅಂದಾಗ ವಿದ್ಯಾರ್ಥಿಗಳ ಬದುಕು ಹಸನಾಗಲು ಸಾಧ್ಯ. ಪೂಜ್ಯರು ಹಗಲಿರುಳು ಎನ್ನದೇ ಈ ಶಿಕ್ಷಣ ಸಂಸ್ಥೆಯನ್ನು ಕಟ್ಟಿದ್ದು ಅವರ ಹೆಸರಿಗೆ ಧಕ್ಕೆ ತರಹದ ಹಾಗೆ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಕಾರ್ಯನಿರ್ವಹಿಸಬೇಕೆಂದರು.

ಪ್ರೊ. ಎಂ.ಎನ್. ಹೊಂಬಾಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಒಕ್ಕೂಟದ ಉಪಾಧ್ಯಕ್ಷರಾದ ಡಾ. ವ್ಹಿ.ಎ. ನಿಂಗೋಜಿ ವಾರ್ಷಿಕ ವರದಿ ಪ್ರಸ್ತುತ ಪಡಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ಆರ್.ಎಸ್. ದಾನರಡ್ಡಿ ಸ್ವಾಗತಿಸಿದರು. ಕ್ರೀಡಾ ವಿಜೇತರಿಗೆ ಪ್ರೊ. ಎಫ್.ಬಿ. ಅಂಗಡಿ ವಿಜೇತ ಸ್ಪರ್ಧಾಳುಗಳಿಗೆ ಬಹಿಮಾನ ವಿತರಿಸಿದರು. ಸ್ಪರ್ಧಾ ಕಾರ್ಯಕ್ರಮವನ್ನು ಪ್ರೊ. ಎಂ.ಎನ್. ಹೊಂಬಾಳಿ ನಿರೂಪಿಸಿದರು.

ಪ್ರೊ. ಕವಿತಾ ಬಡಿಗೇರ ಕಾರ್ಯಕ್ರಮ ನಿರ್ವಹಿಸಿದರೆ, ಪ್ರಧಾನ ಕಾರ್ಯದರ್ಶಿ ಮಧುರಾಜ ಬಳ್ಳಾರಿ ವಂದಿಸಿದರು.

### ಚೇತನಾ ಕರಾಟೆ ಕ್ಲಬ್‌ನ ಕರಾಟೆ ಪಟುಗಳ ಅತ್ಯುತ್ತಮ ಪ್ರದರ್ಶನ

# ರಾಷ್ಟ್ರ ಮಟ್ಟದ ಕರಾಟೆ ಪಂದ್ಯದಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಾವಣಗೇರಿಯಲ್ಲಿ ನಡೆದ ರಾಷ್ಟ್ರ ಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ಗದುಗಿನ ಚೇತನ ಕರಾಟೆ ಕ್ಲಬ್‌ನ 27 ಕರಾಟೆ ಪಟುಗಳು ಭಾಗವಹಿಸಿ ಅತ್ಯತ್ತುಮ ಕರಾಟೆ ಪ್ರದರ್ಶನ ನೀಡಿದರು.



ಕ್ಲಬ್‌ನ ಕರಾಟೆ ಪಟುಗಳಾದ ಸುಮಂತ್ ಡಿ.ಮೆಣಸಿನಕಾಯಿ ಕಟಾ ಪ್ರಥಮ, ಕುಮಿತೆ ದ್ವಿತೀಯ, ಪೃಥ್ವಿ ಎಂ.ಭೂಮಕ್ಕನವರ್ ಕಟಾ ತೃತೀಯ, ವೈಷ್ಣವಿ ಸಿ. ಹಿರೇಮಠ ಕಟಾ ತೃತೀಯ, ಕುಮಿತೆ ತೃತೀಯ ಸ್ಥಾನ, ಶ್ರವಣ ಟಿ.ಜಿ ಕಟಾ ಪ್ರಥಮ, ಕುಮಿತೆ ಪ್ರಥಮ, ಅನುಷಾ ಸಿ.ಪಾಲನಕರ ಕಟಾ ತೃತೀಯ, ಕುಮಿತೆ ತೃತೀಯ, ವಿಕಾಸ್ ಎನ್.ಬಡಿಗೇರ್ ಕಟಾ ದ್ವಿತೀಯ, ಕುಮಿತೆ ಚತುರ್ಥ, ಖುಷಿ ಕೆ.ವೆರ್ಣೆಕರ ಕಟಾ ಪ್ರಥಮ, ಕುಶಾಲ್ ಕೆ.ವೆರ್ಣೆಕರ ಕಟಾ ದ್ವಿತೀಯ, ಕುಮಿತೆ ಪ್ರಥಮ, ಸಮರ್ಥ ಹಳ್ಳಿಕೇರಿ ಕುಮಿತೆ ದ್ವಿತೀಯ, ಕಟಾ ಪ್ರಥಮ, ರೋಹಿತ್ ಪೊಲೀಸ್‌ಪಾಟೀಲ್ ಕುಮಿತೆ ಪ್ರಥಮ, ಕಟಾ ದ್ವಿತೀಯ, ಪುನೀತ್ ಮುದೇನಗುಡಿ ಕಟಾ ತೃತೀಯ, ಸಾನ್ವಿ ಪೂಜಾರ ಕಟಾ ತೃತೀಯ, ಕುಮಿತೆ ತೃತೀಯ ಸ್ಥಾನ ಪಡೆದರು.

ವಿಜಯಾನಂದಯ್ಯ ಗುಡಿಮಠ ಕಟಾ ತೃತೀಯ, ಸಿದ್ದು ಕೆಂಗಾರ್ ಕಟಾ ಪ್ರಥಮ, ಕುಮಿತೆ ತೃತೀಯ, ವಿಫುಲ್ ಶಿದ್ಲಿಂಗ ಕಟಾ ತೃತೀಯ, ಕುಮಿತೆ ತೃತೀಯ, ಪೃಥ್ವಿ ಕಟಾ ತೃತೀಯ, ಪೂರ್ವಿ ಶಿದ್ಲಿಂಗ ಕಟಾ ತೃತೀಯ, ಕುಮಿತೆ ತೃತೀಯ, ಪ್ರಣವ ಶಿದ್ಲಿಂಗ ಕಟಾ ದ್ವಿತೀಯ, ಸಾತ್ವಿಕ ಹೂಗಾರ ಕಟಾ ತೃತೀಯ ಸ್ಥಾನ ಗಳಿಸಿದ್ದಾರೆ. ವಿಜೇತ ವಿದ್ಯಾರ್ಥಿಗಳಿಗೆ ಪಂಚಮುಖಿ ದೇವಸ್ಥಾನ ಹಾಗೂ ಚೇತನ ಕರಾಟೆ ಕ್ಲಬ್‌ನ ಅಧ್ಯಕ್ಷ ಜಿ.ಎಲ್. ಮೇರವಾಡೆ, ರಾಘವೇಂದ್ರ ಹುಲಕೋಟಿ, ತರಬೇತುದಾರರಾದ ಪಿ.ಎಸ್. ಹಬೀಬ ಗುರುಗಳು, ಪಾಲಕರಾದ ಕಿರಣ ವೆರ್ಣೇಕರ, ತರಬೇತುದಾರರಾದ ಚೇತನ ಹಬೀಬ, ಶಿವಾಜಿ ಗಡಾದ, ಗಂಗಾಧರ ಸಾಸ್ವಿಹಳ್ಳಿ, ವಿನಾಯಕ ಗುರನ್ನವರ, ಅಮೃತ ಭಾಂಡಗೆ, ದ್ಯಾಮಪ್ಪ ದಾವೇರಿ, ಪ್ರವೀಣ ಕಾಂಬ್ಳೆ ಹಾಗೂ ಸಂಘದ ಎಲ್ಲಾ ಪದಾಧಿಕಾರಿಗಳು, ವಿದ್ಯಾರ್ಥಿಗಳಿಗೆ ಶುಭ ಕೋರಿದ್ದಾರೆ.

### ರೋಟರಿ ಕ್ಲಬ್ ಗದಗ–ಬೆಟಗೇರಿಯಿಂದ ಯಶಸ್ವಿ 193ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

# 12 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆ




■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ–ಬೆಟಗೇರಿ ವೆಲ್‌ಫೇರ್ ಸೊಸೈಟಿ, ರೋಟರಿ ಕ್ಲಬ್ ಗದಗ–ಬೆಟಗೇರಿ ಹಾಗೂ ಇನ್ನರ್‌ವೀಲ್ ಸಂಸ್ಥೆ ಗದಗ–ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 193ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ 12 ಜನರಿಗೆ ಯಶಸ್ವಿಯಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಲಾಯಿತು. ಸುಜಾತ ಬಿ.ವ್ಹಿ, ಮತ್ತು ದಿ. ಡಾ. ವೆಂಕಟೇಶ ಭೂಮರಡ್ಡಿ ಇವರ ಸ್ಮರಣಾರ್ಥ ಡಾ. ಶಾಂತಾ ವ್ಹಿ.ಭೂಮರಡ್ಡಿ ಇವರು ಪ್ರಾಯೋಜತ್ವವನ್ನು ವಹಿಸಿದ್ದರು. ಸುಮಾರು 36 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆಗೆ ಯೋಗ್ಯರಾದ 12 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯನ್ನು ಕೈಗೊಂಡರು.

ಶಸ್ತ್ರ ಚಿಕಿತ್ಸೆಯ ನಂತರ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ–ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ರೊ. ಶ್ರೀಧರ ಸುಲ್ತಾನಪೂರವಹಿಸಿ ಸರ್ವರನ್ನೂ ಸ್ವಾಗತಿಸಿ, ಸಂಸ್ಥೆಯ ಕಾರ್ಯಕ್ರಗಳನ್ನು ಸರ್ವರಿಗೂ ತಿಳಿಸಿ ಪ್ರಾಯೋಜತ್ವ ವಹಿಸಿದ ಸುಜಾತ ಬಿ.ವ್ಹಿ ಮತ್ತು ಡಾ. ಶಾಂತಾ ವ್ಹಿ.ಭೂಮರಡ್ಡಿಯವರಿಗೆ ಧನ್ಯವಾದಗಳನ್ನು ಸಲ್ಲಿಸಿದರು.

ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಡಾ. ಆರ್.ಬಿ. ಉಪ್ಪಿನ ಹಾಗೂ ಕಾರ್ಯದರ್ಶಿ ರೊ. ಸಂತೋಷ ಅಕ್ಕಿ, ಇನ್ನರ್ ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಎಸ್. ಹೊಸಳ್ಳಿಮಠ, ಇನ್ನರ್‌ವ್ಹೀಲ್ ಸಂಸ್ಥೆಯ ಅಧ್ಯಕ್ಷೆ ನಾಗರತ್ನಾ ಮಾರನಬಸರಿ, ಕಾರ್ಯದರ್ಶಿ ವೀಣಾ ತಿರ್ಲಾಪೂರ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ರೋಟರಿ ವೆಲ್‌ಫೇರ್ ಸೊಸೈಟಿ ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರೂಪಿಸಿದರು. ಇನ್ನರ್‌ವ್ಹೀಲ್ ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪೂರ ವಂದಿಸಿದರು.

ಶಿಬಿರದಲ್ಲಿ ರುದ್ರೇಶ, ನೇತ್ರಾ, ಮಲ್ಲಪ್ಪ ಕುಂಬಾರ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ನೇತ್ರ ಶಸ್ತ್ರ ಚಿಕಿತ್ಸೆಗೆ ಸಹಕರಿಸಿದರು.

> ರೋಟರಿ ಸಂಸ್ಥೆಯ ಸದಸ್ಯರಾದ, ರೊ. ಡಾ. ಪ್ರದೀಪ ಉಗಲಾಟ, ರೊ. ಹೆಚ್.ಎಸ್. ಪಾಟೀಲ, ರೊ. ಅಕ್ಷಯ ಶೆಟ್ಟಿ, ರೊ. ಚನ್ನವೀರ ಹುಣಶಿಕಟ್ಟಿ, ಇನ್ನರ್‌ವ್ಹೀಲ್‌ನ ಪುಷ್ಪಾ ಭಂಡಾರಿ, ಕಸ್ತೂರಿ ಹಿರೇಗೌಡರ, ಸುಮಾ ಪಾಟೀಲ, ಶಾಂತಾ ಮುಂದಿನಮನಿ, ಶಾಂತಾ ಗೌಡರ, ಸಂದ್ಯಾ ಕೋಟಿ, ಸುಶೀಲ ಕೋಟಿ, ಮೀನಾಕ್ಷಿ ಕೊರವಣ್ಣವರ, ಸುನಿತಾ ಪಾಟೀಲ, ಆಶಾ ಪಟ್ಟಣಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ನಿಧನ ವಾರ್ತೆ

### ದಾವಲಬಿ ನದಾಫ್



ಗದಗ: ತಾಲೂಕಿನ ಕುರ್ತಕೋಟಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರೂ, ಮುಸ್ಲಿಂ ಸಮಾಜದ ಹಿರಿಯರು ಆದ ದಾವಲಬಿ ಕೋಂ ರಾಜೇಸಾಬ ನದಾಫ್ (76) ಗುರುವಾರ ಮುಂಜಾನೆ ನಿಧನರಾದರು.

ಮೃತರು ಪತಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಗುರುವಾರ ಸಂಜೆ ಕುರ್ತಕೋಟಿ ಗ್ರಾಮದಲ್ಲಿ ಜರುಗಿತು.

**ಸಂತಾಪ:** ದಾವಲಬಿ ನದಾಫ್ ಅವರ ನಿಧನಕ್ಕೆ ಪ್ರವಾಸೋದ್ಯಮ ಹಾಗೂ ಕಾನೂನು ಸಚಿವ ಎಚ್. ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಕುರ್ತಕೋಟಿ ಗ್ರಾಮದ ಕಾಂಗ್ರೆಸ್ ಮುಖಂಡ, ಎಪಿಎಂಸಿ ಸದಸ್ಯ ಅಪ್ಪಣ್ಣ ಇನಾಮತಿ ಸೇರಿದಂತೆ ಅನೇಕರು ಸಂತಾಪ ವ್ಯಕ್ತಪಡಿಸಿದ್ದಾರೆ.

# ಮಕ್ಕಳ ಕಲಿಕೆಯಲ್ಲಿ ಪಾಲಕರ ಜವಾಬ್ದಾರಿಯಿದೆ



■ವಿಜಯಸಾಕ್ಷಿ ಸುದ್ದಿ, ನರೇಗಲ್

ನಮ್ಮ ಮಕ್ಕಳು ಶಾಲೆಗೆ ಹೋದರೆ ಸಾಲದು. ಅವರ ನಿತ್ಯದ ಅಭ್ಯಾಸದ ಬಗ್ಗೆ ಮನೆಯಲ್ಲಿ ಪಾಲಕರೂ ಕಾಳಜಿ ವಹಿಸಬೇಕು. ಮಕ್ಕಳ ಕಲಿಕೆಯಲ್ಲಿ ಶಿಕ್ಷಕರ ಜೊತೆಗೆ ಪಾಲಕರ ಜವಾಬ್ದಾರಿಯೂ ಇದೆ ಎಂದು ಆಡಳಿತ ಮಂಡಳಿಯ ಸದಸ್ಯ ನಿಂಗನಗೌಡ ಲಕ್ಕನಗೌಡ್ರ ಹೇಳಿದರು.

ಪಟ್ಟಣದ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ನಡೆದ ಪಾಲಕರ ಸಭೆಯಲ್ಲಿ ಅವರು ಮಾತನಾಡಿದರು.

ನಿಮ್ಮ ಮಕ್ಕಳನ್ನು ಅವರಿವರೊಂದಿಗೆ ಹೋಲಿಕೆ ಮಾಡುವುದನ್ನು ಬಿಡಿ. ಇಂದಿನ ಮಕ್ಕಳು ಸೂಕ್ಷ್ಮ ಮನಸ್ಸಿನವರಿದ್ದಾರೆ. ಅವರು ಏನನ್ನೇ ಓದಲಿ, ಅಂಕಗಳನ್ನು ಎಷ್ಟೇ ಗಳಿಸಲಿ ಅದಕ್ಕೆ ಅವರನ್ನು ದೂರದೆ ಅವರಿಗೆ ಪ್ರೋತ್ಸಾಹದ ಮಾತುಗಳನ್ನಾಡಿ. ಇದರಿಂದ ಮಕ್ಕಳಲ್ಲಿ ಅಭ್ಯಾಸದ ಜಾಗೃತಿ ಮೂಡುತ್ತದೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಮಾತನಾಡಿ, ಮಕ್ಕಳು ವರ್ಗಕೋಣೆಯಲ್ಲಿ ಏಕಾಗ್ರತೆಯಿಂದ ಪಾಠಗಳನ್ನು ಆಲಿಸುವದರ ಜೊತೆಗೆ ಸತತ ಪ್ರಯತ್ನ ಹಾಗೂ ಪರಿಶ್ರಮದಿಂದ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಲು ಸಾಧ್ಯವಾಗುತ್ತದೆ. ಶಾಲೆಯ ಫಲಿತಾಂಶ ಹೆಚ್ಚಳಕ್ಕೆ ಶಿಕ್ಷಕರ ಜತೆಗೆ ಪಾಲಕರೂ ಸಹ ಮಕ್ಕಳೊಂದಿಗೆ ಶ್ರಮಿಸಬೇಕೆಂದರು.

ಈ ಸಂದರ್ಭದಲ್ಲಿ ಎ.ಟಿ. ಮಳ್ಳಳ್ಳಿ, ಪಾಲಕರ ಪ್ರತಿನಿಧಿ ಡಿ.ಹೆಚ್. ಕಿಲ್ಲೇದಾರ, ಚನ್ನಬಸಪ್ಪ ಕುಷ್ಟಗಿ, ಸುಮಂಗಲಾ ವಣಗೇರಿ, ಎಸ್.ಎಫ್. ಧರ್ಮಾಯತ, ಎಂ.ಎಸ್. ಅತ್ತಾರ, ಬಿ.ಡಿ. ಯರಗೊಪ್ಪ, ಆರ್.ಎಂ. ಗುಳಬಾಳ, ಎಸ್. ಶಿವಮೂರ್ತಿ ಸೇರಿದಂತೆ ಪಾಲಕರು, ವಿದ್ಯಾರ್ಥಿಗಳು ಇದ್ದರು.

# ಮೈಸೂರಿನಲ್ಲಿ 8ನೇ ಸಾಂಸ್ಕೃತಿಕ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್ ಕೊಪ್ಪಳ, ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಜಸ್ಟ್ ಮಾತ್ ಮಾತಲ್ಲಿ ಮೈಸೂರು ಸ್ನೇಹಕೂಟ ಸಹಯೋಗದಲ್ಲಿ ಸೆಪ್ಟೆಂಬರ್ ಮೊದಲ ವಾರದಲ್ಲಿ ಮೈಸೂರಿನ ಕನ್ನಡ ಸಾಹಿತ್ಯ ಭವನದಲ್ಲಿ 8ನೇಅಖಿಲ ಕರ್ನಾಟಕ ಸಾಂಸ್ಕೃತಿಕ ಸಮ್ಮೇಳನ, ಸಾಹಿತ್ಯೋತ್ಸವ, ಸಾಧಕರಿಗೆ ಪ್ರಶಸ್ತಿ ಪ್ರದಾನ, ಕವಿಗೋಷ್ಠಿ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಭಾಗವಹಿಸುವ ಆಸಕ್ತರು ಟ್ರಸ್ಟ್ ಅಧ್ಯಕ್ಷರು ಹಾಗೂ ಸಮ್ಮೇಳನದ ಸಂಚಾಲಕರಾದ ರುದ್ರಪ್ಪ ಭಂಡಾರಿ(ಮೊ: 7815985505) ಇವರನ್ನು ಸಂಪರ್ಕಿಸಿ ಹೆಸರು ನೋಂದಾಯಿಸಬಹುದು ಎಮದು ಪ್ರಕಟಣೆ ತಿಳಿಸಿದೆ.




ಖ್ಯಾತ ಆಯುರ್ವೇದ ವೈದ್ಯರಾದ ಡಾ. ಬಸವರಾಜ ಕೊಂಚಿಗೇರಿ ಅವರ ಸ್ಮರಣಾರ್ಥ ಗಿಡ ನೆಡುವ ಅಭಿಯಾನವನ್ನು ಶ್ರೀ ಡಿ.ಜಿ.ಎಂ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ೦ಖ ಸಂಯುಕ್ತ ಆಶ್ರಯದಲ್ಲಿ ತಾಲೂಕಿನ ಹೊಂಬಳ ಗ್ರಾಮದಲ್ಲಿ ನೆರವೇರಿಸಲಾಯಿತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಎನ್.ಎಸ್.ಎಸ್ ಕಾರ್ಯಕ್ರಮದ ಅಧಿಕಾರಿ ಡಾ. ಬೂದೇಶ, ಉಪನ್ಯಾಸಕರಾದ ಸುವರ್ಣ ನಿಡಗುಂದಿ, ಡಾ. ಲಿಂಗರಾಜ ನೀಡವನಿ, ನಾಟಿ ವೈದ್ಯರಾದ ನೀಲಪ್ಪ ಕೊಂಚಿಗೇರಿ, ನೆಹರು ಯುವ ಕೇಂದ್ರದ ರವಿ ಹೊಂಬಾಳಿ ಮತ್ತು ವಿದ್ಯಾರ್ಥಿಗಳಾದ ರೋಹಿಣಿ, ಶೈಲಜಾ, ಮಹೇಶಕುಮಾರ್ ಮುಂತಾದವರು ಉಪಸ್ಥಿತರಿದ್ದರು.

# ರೋಟರಿ ಸಂಸ್ಥೆ ಉನ್ನತ ಹೆಗ್ಗಳಿಕೆ ಪಡೆದಿದೆ




**■ವಿಜಯಸಾಕ್ಷಿ ಸುದ್ದಿ, ಗದಗ**

ರೋಟರಿ ಸಂಸ್ಥೆಯು ಉನ್ನತ ಹೆಗ್ಗಳಿಕೆ ಪಡೆದದ್ದು, ತನ್ನ ಸಮಾಜಮುಖಿ ಕಾರ್ಯದಿಂದಾಗಿ ನಾವೆಲ್ಲರೂ ಸಮಾಜಸೇವೆಗಾಗಿ ತೊಡಗಿಸಿಕೊಂಡು ವರ್ಷಪೂರ್ತಿ ವಿಭಿನ್ನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಯಶಸ್ವಿಗೊಳಿಸೋಣ ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ.ರೇವಣಸಿದ್ದೇಶ್ವರ ಉಪ್ಪಿನ ಹೇಳಿದರು.

ಅವರು ಗದುಗಿನ ರೋಟರಿ ಐಕೇರ್ ಸೆಂಟರ್‌ದಲ್ಲಿ ಜರುಗಿದ ಗದಗ-ಬೆಟಗೇರಿ ರೋಟರಿ ಕ್ಲಬ್‌ನ 'ಕ್ಲಬ್ ಅಸೆಂಬ್ಲಿ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತಮ್ಮ ಅಧಿಕಾರ ಅವಧಿಯಲ್ಲಿ ಎಲ್ಲರ ಸಲಹೆ-ಸೂಚನೆ ಮೇರೆಗೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಸರ್ವರೂ ಕೈ ಜೋಡಿಸಿ ಅವುಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸೋಣ ಎಂದರು.

ಕ್ಲಬ್‌ನ ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ ಮಾತನಾಡಿ, ಕ್ಲಬ್‌ನ ಸದಸ್ಯರು ಹಾಗೂ ನಿರ್ದೇಶಕರು ಎಲ್ಲ ಸದಸ್ಯರ ಅಭಿಪ್ರಾಯವನ್ನು ಸಂಗ್ರಹಿಸಿ ಇಂದು ಬಜೆಟ್ ಮಂಡನೆ ಮಾಡಿದ್ದು, ಇದರಲ್ಲಿ ಸಮಾಜಕ್ಕೆ ಉಪಯುಕ್ತವಾದ ಕಾರ್ಯಕ್ರಮಗಳನ್ನು ಸಾಕಾರಗೊಳಿಸೋಣ ಎಂದರು.

ಕ್ಲಬ್‌ನ ಖಜಾಂಚಿ ಶ್ರೀಧರ ಸುಲ್ತಾನಪೂರ 2024-25ನೇ ಸಾಲಿನ ಆಯ-ವ್ಯಯ ಯೋಜನೆಗಳನ್ನು ವಿವರವಾಗಿ ಮಂಡಿಸಿ ಬರಲಿರುವ ವರ್ಷದ ಕ್ಲಬ್‌ನ ಗುರಿಗಳನ್ನು ವಿವರಿಸಿದರು. 2024-25ನೇ ಸಾಲಿನ ನಿರ್ದೇಶಕರಾದ ಡಾ. ಆರ್.ಕೆ. ಗಚ್ಚಿನಮಠ, ಕೆ.ಎನ್. ರೇವಣಕರ, ಎನ್.ಡಿ. ಜೈನ್, ವ್ಹಿ.ಎಸ್. ಯಳಮಲಿ, ಕೆ.ಎಸ್. ಅಂಗಡಿ ಕ್ಲಬ್‌ನ ವಿವಿಧ ಜವಾಬ್ದಾರಿಗಳನ್ನು ಹಾಗೂ ಯೋಜನೆಯನ್ನು ವಿವರಿಸಿದರು.

ಡಾ. ಆರ್.ಡಿ. ಉಪ್ಪಿನ ಸ್ವಾಗತಿಸಿದರು. ಡಾ. ಜಿ.ಬಿ. ಪಾಟೀಲ ಪರಿಚಯಿಸಿದರು. ಕ್ಲಬ್ ಕಾರ್ಯದರ್ಶಿ ಸಂತೋಷ ಅಕ್ಕಿ ವಂದಿಸಿದರು. ಕಾರ್ಯಕ್ರಮದಲ್ಲಿ ಎಸ್.ಎಸ್. ಧರ್ಮಾಯತ್, ಮಹೇಶ ಹಿಂಡಿ, ಸಿ.ಪಿ. ಹುಣಶೀಕಟ್ಟಿ, ಸಿ.ಕೆ. ಜಾಲಿ, ಡಾ. ವ್ಹಿ.ಸಿ. ಕಲ್ಮಠ, ಎಸ್.ವ್ಹಿ. ಕುಂಬಾರ, ಎಂ.ಎಸ್. ಕುಂದ್ರಾಳಹಿರೇಮಠ, ಡಾ. ಯು.ವ್ಹಿ. ಪುರದ, ಡಾ. ಶೇಖರ ಸಜ್ಜನ, ಎಸ್.ಎಚ್. ಪಾಟೀಲ, ಡಾ. ಪಿ.ಎಸ್. ಉಗಲಾಟ, ವ್ಹಿ.ಆರ್. ತಿರ್ಲಾಪೂರ ಉಪಸ್ಥಿತರಿದ್ದರು.

# ಯಕ್ಷ ಸಂಭ್ರಮ, ಪ್ರಶಸ್ತಿ ಪ್ರದಾನ ಜು.28ಕ್ಕೆ







**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ತಮ್ಮ ಮನ್ ಕೀ ಬಾತ್‌ನಲ್ಲಿ ಶ್ಲಾಘಿಸಿರುವ ನಗರದ ಕಲಾಚೇತನ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ಜುಲೈ 28ರಂದು ಸಂಜೆ 6 ಗಂಟೆಗೆ ನಗರದ ತೆ-ೂಂಟದಾರ್ಯ ಕಲ್ಯಾಣಕೇಂದ್ರದಲ್ಲಿ 'ಯಕ್ಷ ಸಂಭ್ರಮ' ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮವನ್ನು ಸಂಸದರು ಹಾಗೂ ಕೇಂದ್ರ ಗ್ರಾಹಕ ವ್ಯವಹಾರ ಮತ್ತು ನಾಗರಿಕ ಪೂರೈಕೆ ಸಚಿವರಾದ ಪ್ರಲ್ಹಾದ ಜೋಶಿ ಉದ್ಘಾಟಿಸಿದರು.

ಬೆಂಗಳೂರಿನ ಚಲನಚಿತ್ರ, ರಂಗಭೂಮಿ ಕಲಾವಿದರಾದ ರಾಮಕೃಷ್ಣ ನೀರ್ನಳ್ಳಿ, ವೈದ್ಯರು ಹಾಗೂ ಕ್ರೀಡಾಪಟುಗಳಾದ ಡಾ. ಜಿ.ಬಿ ಬಿಡಿನಹಾಳ, ಕುಂದಾಪುರದ ಯಕ್ಷಗಾನ ಕಲಾವಿದರಾದ ರಾಘವೇಂದ್ರ ಮಯ್ಯ ಅವರಿಗೆ ಕಲಾಚೇತನ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಪ್ರಸಿದ್ಧ ತಾಳಮದ್ದಲೆ ಕಲಾವಿದರಾದ ಮೋಹನ ಭಾಸ್ಕರ ಹೆಗಡೆ ಪ್ರಶಸ್ತಿ ಪ್ರದಾನ ಮಾಡುವರು. ಮುಖ್ಯ ಅತಿಥಿಗಳಾಗಿ ತೋಂಟದಾರ್ಯ ಸಂಸ್ಥಾನಮಠದ ಆಡಳಿತಾಧಿಕಾರಿ ಎಸ್.ಎಸ್ ಪಟ್ಟಣಶೆಟ್ಟಿ, ನಗರಸಭೆ ನಿಕಟಪೂರ್ವ ಅಧ್ಯಕ್ಷರಾದ ಉಷಾ ದಾಸರ ಆಗಮಿಸುವರು.

ಮಹಾಗಣಪತಿ ಪ್ರವಾಸಿ ಯಕ್ಷಗಾನ ಮಂಡಳಿ ಹಾಲಾಡಿ, ಕುಂದಾಪುರದಿಂದ ಯಕ್ಷಗಾನ ಜರುಗುವುದು. ಪ್ರಸಂಗ-ಕೀಚಕ ವಧೆ ಮತ್ತು ಭಾರತ ರತ್ನ, ವಿಶೇಷ ಆಕರ್ಷಣೆ ಚಿಟ್ಟಾಣಿಯವರ ಕೀಚಕ ಪಾತ್ರ ನಿರ್ವಹಣೆಯಿದೆ. ಈ ಕಾರ್ಯಕ್ರಮಕ್ಕೆ ಕಲಾಸಕ್ತರು ಆಗಮಿಸಲು ಕಲಾಚೇತನ ಸಾಂಸ್ಕೃತಿಕ ಆಕಾಡೆಮಿ ಸಂಚಾಲಕರಾದ ಡಾ. ಕಾವೆಂಶ್ರೀ ವಿನಂತಿಸಿದ್ದಾರೆ.

**ಹತ್ತನೇ ತರಗತಿ ಫಲಿತಾಂಶದಲ್ಲಿ ರಾಜ್ಯಕ್ಕೆ ಮೊದಲ ಸ್ಥಾನ ಪಡೆಯುವತ್ತ ನಮ್ಮ ಪ್ರಯತ್ನ; ಡಿಸಿ ದಿವ್ಯ ಪ್ರಭು**

# ವಿದ್ಯಾಕಾಶಿ ಮಾಡುವತ್ತ ಧಾರವಾಡ ಜಿಲ್ಲಾಡಳಿತ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ವಿದ್ಯಾಕಾಶಿ ಎಂದೇ ಕರೆಸಿಕೊಳ್ಳುವ ಧಾರವಾಡ ಜಿಲ್ಲೆಯನ್ನು ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ರಾಜ್ಯಕ್ಕೆ ನಂಬರ್ ಒನ್ ಸ್ಥಾನಕ್ಕೆ ತರುವ ಮೂಲಕ ಹೆಸರಿಗೆ ತಕ್ಕಂತೆ ವಿದ್ಯಾಕಾಶಿ ಮಾಡುವ ಪ್ರಯತ್ನವನ್ನು ಜಿಲ್ಲಾಡಳಿತ ಆರಂಭಿಸಿದೆ. ಇದಕ್ಕೆ ಶಿಕ್ಷಣ ಇಲಾಖೆ ಅಧಿಕಾರಿಗಳು, ಶಿಕ್ಷಣ ತಜ್ಞರು, ಪರೀಕ್ಷಾ ತರಬೇತಿ ಸಂಸ್ಥೆಗಳು ಮತ್ತು ಸಾರ್ವಜನಿಕರು ಕೈ ಜೊಡಿಸಿದ್ದು, ಎಲ್ಲರ ಸಹಕಾರ, ಪ್ರಯತ್ನದಿಂದ ಗುರಿ ಸಾಧಿಸುವ ವಿಶ್ವಾಸವಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಗುರುವಾರ ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಧಾರವಾಡದ ಹಿರಿಯ ಶಿಕ್ಷಣ ತಜ್ಞರು, ಖಾಸಗಿ ತರಬೇತಿ ಸಂಸ್ಥೆಗಳ ಮುಖ್ಯಸ್ಥರು, ಜಿಲ್ಲಾ ಶೈಕ್ಷಣಿಕ ತರಬೇತಿ ಸಂಸ್ಥೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ ಫಲಿತಾಂಶ ಕುರಿತು ಸಮಾಲೋಚನೆ ಹಾಗೂ ಕ್ರಿಯಾಯೋಜನೆ ರೂಪಿಸುವದಕ್ಕಾಗಿ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಕಳೆದ ವರ್ಷದ 10ನೇ ತರಗತಿ ಪರೀಕ್ಷೆಯಲ್ಲಿ ಶೇ. 72.67ರಷ್ಟು ಸಾಧನೆ ಮಾಡುವ ಮೂಲಕ ಧಾರವಾಡ ಜಿಲ್ಲೆ 22ನೇ ಸ್ಥಾನ ಪಡೆದಿದೆ. ಜಿಲ್ಲೆಯ 495 ಪ್ರೌಢಶಾಲೆಗಳ ಪೈಕಿ ಮೂರು ಶಾಲೆಗಳು ಶೂನ್ಯ ಸಾಧನೆ ಮಾಡಿದ್ದು, 30 ಶಾಲೆಗಳು ಶೇ. 100ರಷ್ಟು ಸಾಧನೆ ಮಾಡಿವೆ ಎಂದು ಹೇಳಿದರು.

ಒಟ್ಟು ಹತ್ತನೇ ವರ್ಗದ ಮಕ್ಕಳ ಪೈಕಿ 8,237 ವಿದ್ಯಾರ್ಥಿಗಳು ಕಲಿಕೆಯಲ್ಲಿ ಹಿಂದುಳಿದಿದ್ದಾರೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಸರಿಯಾದ ಶಿಕ್ಷಣ ನೀಡಿ, ಅವರನ್ನು ಸಾಮಾನ್ಯ ವಿದ್ಯಾರ್ಥಿಗಳಂತೆ ಸುಧಾರಿಸಿ ಈ ಸಲದ ಪರೀಕ್ಷೆಯಲ್ಲಿ ಉತ್ತೀರ್ಣರಾಗುವಂತೆ ಮಾಡುವ ಚಾಲೆಂಜ್ ನಮ್ಮ ಮುಂದಿದೆ.

ಈ ನಿಟ್ಟಿನಲ್ಲಿ ಸಾರ್ವಜನಿಕರು, ಪರಿಣಿತರು, ಶಾಲಾ ಅಭಿವೃದ್ಧಿ ಸಮಿತಿಯವರ ಸಹಕಾರ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಮಕ್ಕಳಲ್ಲಿ ಓದುವ ಭರವಸೆ ಮೂಡಿಸುವ ಅಗತ್ಯವಿದೆ. ಓದಿನಲ್ಲಿ ಮಕ್ಕಳು ಹಿಂದುಳಿಯಲು ಶಿಕ್ಷಕರು ಮಾತ್ರ ಕಾರಣರಲ್ಲ, ಅದರ ಹೊಣೆಯನ್ನು ಪಾಲಕರು ಸೇರಿದಂತೆ ಎಲ್ಲರೂ ವಹಿಸಿಕೊಳ್ಳಬೇಕು. ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡುವುದು, ಅವರ ಉತ್ತಮ ಭವಿಷ್ಯ ರೂಪಿಸುವುದು ನಮ್ಮೆಲ್ಲರ ಜವಾಬ್ದಾರಿ ಆಗಿದೆ ಎಂದು ಹೇಳಿದರು.

ಕರ್ನಾಟಕ ಉನ್ನತ ಶಿಕ್ಷಣ ಅಕಾಡೆಮಿ ಮಾಜಿ ನಿರ್ದೇಶಕ ಹಾಗೂ ಧಾರವಾಡ ಐಐಟಿ ಡೀನ್ ಪ್ರೊ. ಎಸ್.ಎಂ. ಶಿವಪ್ರಸಾದ ಮಾತನಾಡಿ, ಫಲಿತಾಂಶ ಸುಧಾರಣೆಗೆ ಶಿಕ್ಷಕರಲ್ಲಿ ಮತ್ತು ವಿದ್ಯಾರ್ಥಿಗಳಲ್ಲಿ ತರಬೇತಿ ಮೂಲಕ ಓದು, ಕಲಿಕೆಯ ಕೌಶಲ್ಯ ಬೆಳೆಸಬೇಕು ಎಂದರು.

ಸಭೆಯಲ್ಲಿ ಶಿಕ್ಷಣ ತಜ್ಞ ವಿನಾಯಕ ಜೋಶಿ, ಪಾಟೀಲ ಟ್ಯೂಶನ್ ಕ್ಲಾಸಸ್ ಪ್ರಾಚಾರ್ಯ ಬಸವರಾಜ ಪಾಟೀಲ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಸುರೇಶ ಕೆ.ಪಿ, ಶಾಲಾ ಶಿಕ್ಷಣ ಇಲಾಖೆಯ ಡಿಡಿಪಿಐ ಎಸ್.ಎಸ್. ಕೆಳದಿಮಠ, ಡೈಟ್‌ನ ಪ್ರಾಚಾರ್ಯೆ ಜಯಶ್ರೀ ಕಾರೇಕರ, ಜಿಲ್ಲಾ ಕೈಗಾರಿಕೆ ಇಲಾಖೆಯ ಉಪನಿರ್ದೇಶಕ ಡಾ. ಭೀಮಪ್ಪ ಎಂ.ಎನ್., ಎಸ್.ಎಸ್.ಎಲ್.ಸಿ ಜಿಲ್ಲಾ ಕೊರ್ಡಿನೇಟರ್ ರವಿಕುಮಾರ ಬಾರಾಟಕ್ಕೆ, ಡಯಟ್‌ನ ಹಿರಿಯ ಉಪನ್ಯಾಸಕ ಎ.ಎ. ಖಾಜಿ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಎಪಿಸಿಓ ಎಸ್.ಎನ್. ಕಳಸಣ್ಣವರ ಭಾಗವಹಿಸಿ ಸಲಹೆ-ಸೂಚನೆ ನೀಡಿದರು.

# ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಧಾರವಾಡದ ಕರ್ನಾಟಕ ರಾಜ್ಯ ಬಾಲ ವಿಕಾಸ ಅಕಾಡಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಅವರು ಬುಧವಾರ ನಗರದ ಬಾಲಕಿಯರ ಸರಕಾರಿ ಬಾಲ ಮಂದಿರಕ್ಕೆ ಭೇಟಿ ನೀಡಿ ಅಲ್ಲಿನ ವಸತಿ, ಆಹಾರ ಪದಾರ್ಥಗಳು, ಕ್ರೀಡೆ ಹಾಗೂ ಆರೋಗ್ಯಕ್ಕೆ ಸಂಬಂಧಿಸಿದ ಪರಿಕರಗಳನ್ನು ಪರಿಶೀಲಿಸಿದರು. ಮಕ್ಕಳೊಂದಿಗೆ ಸಂವಾದ ಮಾಡಿ, ಮಕ್ಕಳ ಕುಶಲೋಪರಿ ವಿಚಾರಿಸಿದರು. ಮಕ್ಕಳ ಹವ್ಯಾಸಗಳು, ಮಕ್ಕಳ ವಿಶೇಷ ಪ್ರತಿಭೆಗಳ ಬಗ್ಗೆ ಚರ್ಚಿಸಿದರು.



ಮಕ್ಕಳಿಗೆ ಕೌಟುಂಬಿಕ ವಾತಾವರಣವನ್ನು ಸೃಷ್ಟಿಸುವುದು, ಮಕ್ಕಳ ಸಮಸ್ಯೆಗಳಿಗೆ ಸ್ಪಂದಿಸುವುದು ಮಕ್ಕಳೊಂದಿಗೆ ನಿರಂತರ ಸಮಾಲೋಚನೆ ಮಾಡುವುದು ಹಾಗೂ ಸೂಕ್ತ ಮಾರ್ಗದರ್ಶನ ನಿಡುವ ಮೂಲಕ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಶ್ರಮಿಸಬೇಕು ಎಂದು ತಿಳಿಸಿದರು.

ಬಾಲಮಂದಿರ ಕಟ್ಟಡ ವೀಕ್ಷಿಸಿ ಮಕ್ಕಳ ಹಿತದೃಷ್ಟಿಯಿಂದ ಕಾಂಪೌಂಡ್ ಅವಶ್ಯವಿದ್ದು, ಬೇಗನೆ ಅನುದಾನ ಬಿಡುಗಡೆಗೆ ಅನುಪಾಲನೆ ಮಾಡಲು ಸೂಚಿಸಿದರು.

ಮಳೆಗಾಲದ ಅವಧಿಯಲ್ಲಿ ಸಾಂಕ್ರಾಮಿಕ ರೋಗಗಳು ಮಕ್ಕಳಿಗೆ ತಗುಲದಂತೆ ಎಚ್ಚರ ವಹಿಸಿ ಮತ್ತು ವಸತಿ ನಿಲಯದ ಸುತ್ತಮುತ್ತ ಕೊಳಚೆ ನೀರು ನಿಲ್ಲದಂತೆ ಎಚ್ಚರ ವಹಿಸಬೇಕೆಂದು ಸೂಚಿಸಿದರು.

ಈ ಸಂದರ್ಭದಲ್ಲಿ ಬಾಲಕಿಯರ ಸರಕಾರಿ ಬಾಲಮಂದಿರದ ಅಧೀಕ್ಷಕರಾದ ಲಕ್ಷ್ಮೀ ಬಾಗೇವಾಡಿ, ಶಶಿಕಲಾ ಕವಲೂರು, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ಪ್ರವೀಣಕುಮಾರ ಬ.ಬೆಟಗೇರಿ, ರೂಪಾ ಎಸ್.ಉಪ್ಪಿನ್, ರವಿ ಉಮಚಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

**ಡೆಂಘೀ ರೋಗ ನಿಯಂತ್ರಣಕ್ಕಾಗಿ ಔಷಧ ಸಿಂಪರಣೆ | 2 ಪ್ರಕರಣ ಪತ್ತೆ, ಗುಣಮುಖ**

# ಡೆಂಘೀ ಲಗಾಮಿಗೆ ಮುಂಜಾಗ್ರತೆ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕಳೆದ ವಾರ 2 ಡೆಂಘೀ ಪ್ರಕರಣ ದಾಖಲಾಗಿರುವ ಹಿನ್ನೆಲೆಯಲ್ಲಿ ನಿಯಂತ್ರಣಕ್ಕಾಗಿ ಗ್ರಾಮದ ಗಲ್ಲಿಗಳಲ್ಲಿ ಗ್ರಾಮ ಪಂಚಾಯತಿಯು ಔಷಧ ಸಿಂಪರಣಿ ಸೇರಿದಂತೆ ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ.

ಸೊಳ್ಳೆಗಳಿಂದಲೇ ಹರಡುವ ಅಪಾಯಕಾರಿ ಡೆಂಘೀ ಜ್ವರ ನಿಯಂತ್ರಣಕ್ಕಾಗಿ ವೈದ್ಯಾಧಿಕಾರಿಗಳ ಸಲಹೆಯಂತೆ ನೀರು ನಿಂತ ಸ್ಥಳ ಮತ್ತು ಗಟಾರುಗಳಲ್ಲಿ ಔಷಧ ಸಿಂಪರಣಿ ಮಾಡಲಾಗುತ್ತಿದೆ. ನೀರು ಪೂರೈಕೆ ಮಾಡುವ ಓವರ್ ಹೆಡ್ ಟ್ಯಾಂಕ್ ಸ್ವಚ್ಛತೆ, ವಾರ್ಡ್‌ಗಳಲ್ಲಿರುವ ನೀರು ಸಂಗ್ರಹಿಸುವ ಸಿಸ್ಟನ್‌ನ್ನು ಸ್ವಚ್ಛಗೊಳಿಸಲಾಗುತ್ತಿದೆ. ರೋಗ ನಿಯಂತ್ರಣಕ್ಕಾಗಿ ಸಾರ್ವಜನಿಕರು ಸಹಕಾರ ನೀಡಬೇಕೆಂದು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ವಿನಂತಿಸಿಕೊಂಡಿದ್ದು, ಈ ಕುರಿತು ಗ್ರಾಮದಲ್ಲಿ ಡಂಗುರು ಸಾರಿದ್ದಾರೆ.



ಪ್ರಾಥಮಿಕ ಆರೋಗ್ಯ ಕೇಂದ್ರವು ಗ್ರಾಮದ ಮಾರುತಿ ನಗರದ ನಿವಾಸಿಗಳಿಗೆ ತಗುಲಿದ್ದ ಡೆಂಘೀ ರೋಗವನ್ನು ಪತ್ತೆ ಹಚ್ಚಿ ಉತ್ತಮ ಚಿಕಿತ್ಸೆಯೊಂದಿಗೆ ಸಂಪೂರ್ಣ ಗುಣ ಮುಖ ಮಾಡಿದ್ದಾರೆ. ಆದರೆ ಆರೋಗ್ಯ ಕೇಂದ್ರಕ್ಕೆ ದಾಖಲಾಗದೇ ಡೆಂಘೀ ಪ್ರಕರಣದ ರೋಗಿಗಳು ಖಾಸಗಿ ಗದಗ ನಗರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ ಎಂದು ತಿಳಿದು ಬಂದಿದೆ. ಬಹಳ ದಿನಗಳಿಂದ ನೀರು ಸಂಗ್ರಹವಾಗಿರುವ ಸ್ಥಳಗಳಲ್ಲಿ ಮೀನುಗಳನ್ನು ಬಿಟ್ಟಿದ್ದಾರೆ.

ಗ್ರಾಮದಲ್ಲಿ 12 ಜನ ಆಶಾ ಕಾರ್ಯಕರ್ತೆಯರೊಂದಿಗೆ ಆರೋಗ್ಯ ಕಾರ್ಯಕರ್ತರು ಪ್ರತಿದಿನ ವಾರ್ಡ್‌ಗಳಲ್ಲಿಯ ಮನೆ ಮನೆಗೆ ತೆರಳಿ ಜ್ವರದ ಪ್ರಕರಣವನ್ನು ಪತ್ತೆ ಹಚ್ಚಿ ಆಸ್ಪತ್ರೆಗೆ ದಾಖಲಿಸುವುದು ಮತ್ತು ಔಷಧಗಳನ್ನು ನೀಡಿ ಜಾಗೃತಿ ಮೂಡಿಸುತ್ತಿದ್ದಾರೆ. ಅಪಾಯಕಾರಿಯಾಗಿರುವ ಈ ಡೆಂಘೀ ಜ್ವರವು ರಕ್ತದ ಕಣಗಳ ಸಂಖ್ಯೆಯನ್ನು ಕಡಿಮೆ ಮಾಡುತ್ತದೆ. ಅಂತವರ ಮೇಲೆ ಸಂಶಯ ಬಂದಲ್ಲಿ ನಮ್ಮ ಆರೋಗ್ಯ ಕೇಂದ್ರಕ್ಕೆ ದಾಖಲು ಮಾಡಿ ಕೇಂದ್ರದಲ್ಲಿಯೇ ಇರುವ ರಕ್ತ ಕಣಗಳ ಪರಿಶೀಲನೆಯ (ಸಿ.ಬಿ.ಸಿ)ಯಂತ್ರದ ಮೂಲಕ ತಪಾಸಣೆ ಮಾಡಲಾಗುತ್ತಿದೆ. ಡೆಂಗ್ಯೂ ಪತ್ತೆಯಾದಲ್ಲಿ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗುವುದು ಎಂದು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

ಗ್ರಾಮದ ಐದಾರು ವಾರ್ಡ್‌ಗಳಲ್ಲಿ 8-10 ದಿನಕ್ಕೊಮ್ಮೆ ನೀರು ಪೂರೈಕೆ ಆಗುತ್ತಿದ್ದು, ಸಣ್ಣ ಪಾತ್ರೆಗಳಲ್ಲೂ ನೀರು ಶೇಕರಿಸಿಟ್ಟುಕೊಳ್ಳುವ ಅನಿವಾರ್ಯತೆಯಿದೆ. ಸಮರ್ಪಕ ನೀರು ಪೂರೈಕೆ ಮಾಡಿದರೆ ಸಂಗ್ರಹ ಮಾಡುವ ಅವಶ್ಯವಿಲ್ಲ. ಆದ್ದರಿಂದ ಪ್ರತಿ ವಾರ್ಡಿಗೂ 2 ದಿನಕ್ಕೊಮ್ಮೆ ನೀರು ಪೂರೈಕೆ ಮಾಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಚಿಕ್ಕಂದಿನಿಂದಲೇ ರಾಜಕೀಯ ಪ್ರಜ್ಞೆ ಬೆಳೆಸಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್**

ವಿದ್ಯಾರ್ಥಿಗಳಿಗೆ ಚಿಕ್ಕಂದಿನಿಂದಲೇ ಸಂವಿಧಾನದ, ರಾಜಕೀಯದ ಕಲ್ಪನೆ ಕೊಟ್ಟರೆ ಮುಂದೆ ಅವರು ಉತ್ತಮ ಸಂಸದೀಯ ಪಟುಗಳಾಗುತ್ತಾರೆ. ಅದಕ್ಕೆಂದೇ ಶಾಲೆಗಳಲ್ಲಿ ಶಾಲಾ ಸಂಸತ್ತನ್ನು ರಚಿಸಲಾಗುತ್ತಿದೆ. ಇಂದು ಉದ್ಘಾಟನೆಗೊಂಡ ಸಂಸತ್ತಿನ ಸದಸ್ಯರುಗ ಪ್ರಾಮಾಣಿಕತೆಯಿಂದ ಕಾರ್ಯ ನಿರ್ವಹಿಸುವ ಕೆಲಸವನ್ನು ಮಾಡಬೇಕೆಂದು ಶ್ರೀ ಅನ್ನದಾನ ವಿಜಯ ಬಾಲಿಕೆಯರ ಪ್ರೌಢಶಾಲೆಯ ಚೇರಮನ್ ವೀರಣ್ಣ ಹಳ್ಳಿ ಹೇಳಿದರು.

ಶಾಲಾ ಭವನದಲ್ಲಿ ನಡೆದ 2024-25ರ ಶಾಲಾ ಸಂಸತ್ತನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕ ಸಲಹೆಗಾರ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಮಾತನಾಡಿ, ಪ್ರಜಾಪ್ರಭುತ್ವದ ಗುಣಲಕ್ಷಣಗಳನ್ನು ಅರಿಯಲು ಈ ಶಾಲಾ ಸಂಸತ್ತು ಸಹಕಾರಿಯಾಗಿದೆ. ಜಗತ್ತಿನಲ್ಲಿಯೇ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿರುವ ಭಾರತದ ಹಿರಿಮೆ, ಗರಿಮೆ ದೊಡ್ಡದು. ಅದನ್ನು ತಿಳಿಯಲು ಪ್ರಯತ್ನಿಸಿ ಎಂದರು.



ಅಧ್ಯಕ್ಷತೆ ವಹಿಸಿದ್ದ ಆಡಳಿತ ಮಂಡಳಿ ಸದಸ್ಯ ಆರ್.ಜಿ. ಪಾಟೀಲ ಮಾತನಾಡಿ, ಈ ಶಾಲೆ ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನೂರಕ್ಕೆ ನೂರು ಫಲಿತಾಂಶವನ್ನು ಸಾಧಿಸಿದೆ. ಇದಕ್ಕೆ ಇಲ್ಲಿನ ಎಲ್ಲ ಗುರುಗಳ ಪ್ರಾಮಾಣಿಕ ಶ್ರಮ ಕಾರಣ. ನೀವು ದೇಶದಲ್ಲಿ ನಡೆಯುತ್ತಿರುವ ಸಂಗತಿಗಳನ್ನು, ಘಟನೆಗಳನ್ನು ನೋಡುತ್ತ ಬೆಳೆಯಬೇಕೆಂದರು.


ಸಮಾರಂಭದಲ್ಲಿ ನೂರಕ್ಕೆ ನೂರು ಫಲಿತಾಂಶ ಸಾಧಿಸಿದ ಶಾಲೆಯ ಸಿಬ್ಬಂದಿಯವರನ್ನು ಸಂಸ್ಥೆಯ ಪರವಾಗಿ ಸನ್ಮಾನಿಸಲಾಯಿತು. ಈಚೆಗೆ ನಿವೃತ್ತರಾದ ಶಿಕ್ಷಕಿ ಎಚ್. ಎಂ. ರತ್ನಮ್ಮ ದಂಪತಿಗಳನ್ನು, ಪತ್ರಕರ್ತ ಸಂಘದ ಅಧ್ಯಕ್ಷ ಆದರ್ಶ ಕುಲಕರ್ಣಿಯವರನ್ನು, ತಾಲೂಕಾ ನೋಂದಣಾಧಿಕಾರಿ ಗೋಪಾಲ ಬಿಲಕೇರಿಯವರನ್ನು ಸನ್ಮಾನಿಸಲಾಯಿತು. ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಸ್ವಾಗತಿಸಿದರು. ಶಿಕ್ಷಕ ಬಿ.ಡಿ. ಯರಗೊಪ್ಪ ಪರಿಚಯಿಸಿದರು. ಶಿಕ್ಷಕ ಎಸ್.ಶಿವಮೂರ್ತಿ ಪ್ರಮಾಣ ವಚನ ಬೋಧಿಸಿದರು.

ವಿದ್ಯಾರ್ಥಿನಿಯರಾದ ಗೌರಿ ಪಾಟೀಲ, ಆಯೇಶಾ ಬಸಾಪೂರ ಮತ್ತು ಅನುಪಮಾ ಗ್ರಾಮಪುರೋಹಿತ ನಿರ್ವಹಿಸಿದರು. ವೇದಿಕೆಯ ಮೇಲೆ ಆಡಳಿತ ಮಂಡಳಿ ಸದಸ್ಯ ನಿಂಗನಗೌಡ ಲಕ್ಕನಗೌಡ್ರ ಮತ್ತು ಶಿಕ್ಷಕರು ಉಪಸ್ಥಿತರಿದ್ದರು.

**ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಪ್ರತಿಭಾ ಪುರಸ್ಕಾರ**

# ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**



ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಮೂರು ಸ್ಥಾನಗಳನ್ನು ಪಡೆದ ಗದಗ ತಾಲೂಕಿನ ಸರಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವ ಕಾರ್ಯಕ್ರಮವನ್ನು ಜು. 19ರಿಂದ ಆರಂಭಿಸಲಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮೊದಲ ಮೂರು ಸ್ಥಾನಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಕ್ರಮವಾಗಿ ಪ್ರಶಸ್ತಿ ಪತ್ರ, ಕಾಲೇಜ್ ಬ್ಯಾಗ್, 1,500 ರೂ, 1,000, ರೂ. 500 ರೂ ಹಾಗೂ ಈರ್ವರಿಗೆ ತಲಾ 500 ರೂ.ಗಳನ್ನು ನೀಡಿ ಗೌರವಿಸಲಾಗುವದು.

ಗದಗ ತಾಲೂಕಿನ ಒಟ್ಟು 30 ಸರಕಾರಿ ಶಾಲೆಗಳಿಗೆ ಪ್ರತಿಭಾ ಪ್ರತಿಷ್ಠಾನ ತಂಡವು ನೇರವಾಗಿ ಆಯಾ ಶಾಲೆಗೆ ಭೇಟಿ ನೀಡಿ ಆಯಾ ವಿದ್ಯಾರ್ಥಿಗಳನ್ನು ಶಾಲೆಗೆ ಆಮಂತ್ರಿಸಿ ಅದೇ ಶಾಲೆಯಲ್ಲಿ ಸನ್ಮಾನಿಸುವ ಮೂಲಕ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವ ಉದ್ದೇಶವನ್ನು ಹೊಂದಲಾಗಿದೆ.

ಕಳೆದ 10 ವರ್ಷಗಳಿಂದ ಪ್ರತಿಷ್ಠಾನವು ಪ್ರತಿಭಾ ಪುರಸ್ಕಾರ ನೀಡುತ್ತ ಬಂದಿದ್ದು, ಎಲ್ಲ ಪ್ರತಿಭಾನ್ವಿತರನ್ನು ಪ್ರೋತ್ಸಾಹಿಸಲು ಕಳೆದ ವರ್ಷದಿಂದ ಕೆಲವು ಮಾರ್ಪಾಡು ಮಾಡಿಕೊಂಡಿದ್ದು ಜೊತೆಗೆ ಹೆಸರು ಹೇಳಲು ಇಚ್ಚಿಸದ ದಾನಿಯೊಬ್ಬರು ಈ ಕಾರ್ಯಕ್ಕೆ ಕೈ ಜೋಡಿಸಿದ್ದರಿಂದ ಪ್ರತಿಷ್ಠಾನಕ್ಕೆ ಬಲ ಬಂದಿದೆ. 30 ಶಾಲೆಗಳಲ್ಲಿ ತಲಾ ಐವರು ಪ್ರತಿಭಾನ್ವಿತರನ್ನು ಶಿಕ್ಷಣ ಇಲಾಖೆ ಗುರುತಿಸಿ ಪಟ್ಟಿ ನೀಡಿದ್ದು, ಡಿಡಿಪಿಐ, ಬಿಇಓ ಶಹರ/ ಗ್ರಾಮೀಣ ಹಾಗೂ ಮುಖ್ಯೋಪಾಧ್ಯಾಯರ ಸಹಕಾರದೊಂದಿಗೆ ಈ ಕಾರ್ಯವನ್ನು ಕೈಗೊಳ್ಳಲಾಗಿದೆ.

ಪ್ರತಿಷ್ಠಾನದ ಗೌರವ ಅಧ್ಯಕ್ಷರಾದ ಪೂಜ್ಯ ಜ.ಡಾ.ತೆ-ೂಂಟದ ಸಿದ್ಧರಾಮ ಮಹಾಸ್ವಾಮಿಗಳ ಕೃಪಾಶೀರ್ವಾದಿಂದ ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ, ಕಾರ್ಯದರ್ಶಿ ಶಿವಪ್ಪ ಕತ್ತಿ, ಖಜಾಂಚಿ ಸಿದ್ಧಲಿಂಗನಗೌಡ ಪಾಟೀಲ, ನಿರ್ದೇಶಕರಾದ ಶಿವಾನಂದ ದಂಡಿನ, ವಿರುಪಾಕ್ಷಪ್ಪ ಮ್ಯಾಗೇರಿ, ಚನ್ನಪ್ಪ ಮಲ್ಲಾಡದ, ತೋಂಟೇಶ ವೀರಲಿಂಗಯ್ಯನಮಠ, ವಿರುಪಾಕ್ಷಪ್ಪ ಶಾಂತಗೇರಿ, ಕಳಕಪ್ಪ ಕುರ್ತಕೋಟಿ ಇವರೆಲ್ಲರ ಸಹಕಾರದೊಂದಿಗೆ ಈ ಕಾರ್ಯವನ್ನು ಸಾಕಾರಗೊಳಿಸಲಾಗುತ್ತಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ತಿಳಿಸಿದ್ದಾರೆ.

ಜು. 19ರಂದು ಮುಂಜಾನೆ 10.30 ಗಂಟೆಗೆ ಗದಗ ಕಣವಿ ಗ್ರಾಮದ ಸರಕಾರಿ ಶಾಲೆ, 11.30ಕ್ಕೆ ಮುಳಗುಂದದ ಅಂಜುಮನ್ ಉರ್ದು ಹೈಸ್ಕೂಲ್, ಮಧ್ಯಾಹ್ನ 2 ಗಂಟೆಗೆ ಮುಳಗುಂದದ ಮೊರಾರ್ಜಿ ವಸತಿ ಶಾಲೆ, ಮಧ್ಯಾಹ್ನ 3 ಗಂಟೆಗೆ ಮುಳಗುಂದದ ಸರಕಾರಿ ಶಾಲೆಯಲ್ಲಿ ಪ್ರತಿಭಾ ಪುರಸ್ಕಾರ ನಡೆಯಲಿದೆ.
ಜು. 20ರಂದು ಮುಂಜಾನೆ 8 ಗಂಟೆಗೆ ಹೊಂಬಳ ಗ್ರಾಮದ ಸರಕಾರಿ ಶಾಲೆ, ಮುಂಜಾನೆ 9 ಗಂಟೆಗೆ ಲಿಂಗದಾಳ ಸರಕಾರಿ ಶಾಲೆ, ಮುಂಜಾನೆ 10 ಗಂಟೆಗೆ ಕದಡಿಯ ಸರಕಾರಿ ಶಾಲೆಯಲ್ಲಿ ಪ್ರತಿಭಾ ಪುರಸ್ಕಾರ ನಡೆಯಲಿದೆ.

# ಜಿಲ್ಲಾ ನದಾಫ ಪಿಂಜಾರ ಘಟಕದ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ರಾಜೀವ ಗಾಂಧಿನಗರದಲ್ಲಿಯ ಶ್ರೀ ಸಂತ ಶಿಶುನಾಳ ಶರೀಫ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ಕರ್ನಾಟಕ ರಾಜ್ಯ ನದಾಫ ಪಿಂಜಾರ ಸಂಘದ ಗದಗ ಜಿಲ್ಲಾ ಘಟಕದ ಆಡಳಿತ ಮಂಡಳಿ ಸಭೆಯನ್ನು ಜುಲೈ 21ರಂದು ಕರೆಯಲಾಗಿದೆ.

ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳು, ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯರು, ಗದಗ ಶಹರ, ಗದಗ ತಾಲೂಕಾ, ಗ್ರಾಮೀಣ, ಶಿರಹಟ್ಟಿ, ಲಕ್ಷ್ಮೇಶ್ವರ, ರೋಣ, ಗಜೇಂದ್ರಗಡ, ಮುಂಡರಗಿ ಮತ್ತು ನರಗುಂದ ತಾಲೂಕು ಘಟಕಗಳ ಅಧ್ಯಕ್ಷರು, ಕಾರ್ಯದರ್ಶಿ ಮತ್ತು ರಾಜ್ಯ ಸಮಿತಿ ಸದಸ್ಯರು ಸಭೆಗೆ ಹಾಜರಾಗಲು ಜಿಲ್ಲಾ ಕಾರ್ಯದರ್ಶಿಯಾದ ಎಂ.ಬಿ. ನದಾಫ ವಕೀಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka